# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 130 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 04–12–2023 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 01 Issue - 130 | Title- Code: KARKAN 28269 | Chitradurga | Date: 04-12-2023 Monday | Page: 4 | Price: Rs. 2-00



**ಒಳಪುಟದ ಸುದ್ದಿಗಳು**

ಕುರುಬರಳ್ಳಿಯಲ್ಲಿ ಸುವರ್ಣ ಕರ್ನಾಟಕ ಸಂಭ್ರಮ 2

ಜನರ ಸಮಸ್ಯೆಗಳಿಗೆ ಸ್ಪಂದಿಸದೇ ನಿರ್ಲಕ್ಷ್ಯ ವಹಿಸಿದರೆ ಜನರ ಆಕ್ರೋಶಕ್ಕೆ ತುತ್ತಾಗುವಿರಿ: ಶಾಸಕ 3

ಬಿಜೆಪಿ ಕಾಂಗ್ರೆಸ್‌ಗೆ ನೈತಿಕ ಪಾಠ ಹೇಳುವುದು ಹಾಸ್ಯಾಸ್ಪದ: ಗೋಪಾಲಕೃಷ್ಣ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಡಿ.4ರಂದು ರೈತರಿಗೆ ತರಬೇತಿ ಕಾರ್ಯಾಗಾರ

» **ಚಿತ್ರದುರ್ಗ**

ಹಿರಿಯೂರು ತಾಲ್ಲೂಕಿನ ಬಬ್ಬೂರು ಜಿಲ್ಲಾ ಕೃಷಿ ತರಬೇತಿ ಕೇಂದ್ರದಲ್ಲಿ ಡಿಸೆಂಬರ್ 4ರಂದು ಬೆಳಿಗ್ಗೆ 10ಕ್ಕೆ ಬಿಇಇ ಸ್ಟಾರ್‌ಲೇಬಲ್‌ವುಳ್ಳ ಇಂಧನ ದಕ್ಷ ಪಂಪ್‌ಸೆಟ್ ಬಳಕೆ ಮತ್ತು ನೀರಿನ ಸಂರಕ್ಷಣೆ ಕುರಿತು ರೈತರಿಗೆ ಒಂದು ದಿನದ ತರಬೇತಿ ಕಾರ್ಯಾಗಾರ ಆಯೋಜಿಸಲಾಗಿದೆ. ಆಸಕ್ತಿಯುಳ್ಳ ರೈತರು ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಬಬ್ಬೂರು ಫಾರಂ ಜಿಲ್ಲಾ ಕೃಷಿ ತರಬೇತಿ ಕೇಂದ್ರದ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ.

### 7 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ಧೆ

» **ಚಿತ್ರದುರ್ಗ**

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ವತಿಯಿಂದ ಡಿಸೆಂಬರ್ 7 ರಂದು ಬೆಳಿಗ್ಗೆ 10.30ಕ್ಕೆ ಚಿತ್ರದುರ್ಗ ನಗರದ ಜಿಲ್ಲಾ ಕ್ರೀಡಾಂಗಣ ಸಭಾಂಗಣದಲ್ಲಿ 2023–24ನೇ ಸಾಲಿನ ಜಿಲ್ಲಾ ಮಟ್ಟದ ಯುವಜನೋತ್ಸವದ ಆಯ್ಕೆ ಸ್ಪರ್ಧೆಗಳನ್ನು ಏರ್ಪಡಿಸಲಾಗಿದೆ. ಕನ್ನಡ, ಇಂಗ್ಲೀಷ್ ಹಾಗೂ ಹಿಂದಿ ಭಾಷೆಯಲ್ಲಿ ಜಾನಪದ ನೃತ್ಯ ಹಾಗೂ ಗೀತೆ ಗಾಯನ ಸ್ಪರ್ಧೆಯಲ್ಲಿ ವೈಯಕ್ತಿಕ ಹಾಗೂ 10 ಜನರ ತಂಡವಾಗಿ ಪಾಲ್ಗೊಳ್ಳಬಹುದು. ವೈಯಕ್ತಿಕ ಸ್ಪರ್ಧೆಗೆ 7 ನಿಮಿಷ ಹಾಗು ಗುಂಪು ಸ್ಪರ್ಧೆಗೆ 15 ನಿಮಿಷ ಕಾಲವಕಾಶ ನೀಡಲಾಗುವುದು. ಇದರೊಂದಿಗೆ ನಿಯಮಗಳಿಗೆ ಒಳಪಟ್ಟು ಕಥೆ ಬರವಣಿಗೆ, ಪೋಸ್ಟರ್ ಮೇಕಿಂಗ್, ಭಾಷಣ ಹಾಗೂ ಛಾಯಚಿತ್ರ ಸ್ಪರ್ಧೆಗಳು ಜರುಗಲಿವೆ. ಚಿತ್ರದುರ್ಗ ಜಿಲ್ಲೆಯ 15 ರಿಂದ 29 ವರ್ಷದ ಒಳಗಿನವರು ಮಾತ್ರ ಪಾಲ್ಗೊಳ್ಳು ಅವಕಾಶವಿದ್ದು, ಕಡ್ಡಾಯವಾಗಿ ಎಸ್‌ಎಸ್‌ಎಲ್‌ಸಿ ಅಂಕಪಟ್ಟಿ ಅಥವಾ ಇತರೆ ಜನ್ಮದಿನಾಂಕ ದೃಢೀಕರಣ ಪತ್ರ ಹಾಜರು ಪಡಿಸಬೇಕು. ಸ್ಪರ್ಧೆಗಳು ಬೆಳಗ್ಗೆ 10.30 ರಿಂದ ಪ್ರಾರಂಭವಾಗಲಿರುವುದರಿಂದ 10 ಗಂಟೆಯ ಒಳಗಾಗಿ ಸ್ಪರ್ಧಾಳುಗಳೂ ವರದಿ ಮಾಡಿಕೊಳ್ಳಬೇಕು.

### ನುಡಿದಂತೆ ನಡೆದಿದ್ದೇವೆ: ಶಾಸಕ ಬಸವರಾಜು

» **ಚನ್ನಗಿರಿ**

ನಮ್ಮ ಸರ್ಕಾರ ನುಡಿದಂತೆ ನಡೆದಿದೆ, ಕೊಟ್ಟ ಮಾತಿನಂತೆ ಪ್ರತಿ ತಿಂಗಳು ನಿಮ್ಮ ಅಕೌಂಟ್ ಗೆ ಎರಡು ಸಾವಿರ ಬರುತ್ತಿದೆ, ಕೇಂದ್ರ ಸರ್ಕಾರ ಸಿಲಿಂಡರ್ ಬೆಲೆ 2 ಸಾವಿರ ಮಾಡಿದರೂ ಹೆದರುವ ಅವಶ್ಯಕತೆ ಇಲ್ಲ, ನಿಮ್ಮ ಕಣ್ಣೀರು ಒರೆಸುವ ಕೆಲಸ ಮಾಡಿದ್ದೇವೆ ಎಂದು ಜೋಳದಾಳು ಗ್ರಾಮದಲ್ಲಿ ತಿಳಿಸಿದರು. ಧರ್ಮಸ್ಥಳ ಗ್ರಾಮೀಣಾಭಿವೃದ್ಧಿ ಸಂಸ್ಥೆ ಆಯೋಜಿಸಿದ್ದ ಸಾಮೂಹಿಕ ಸತ್ಯನಾರಾಯ ಪೂಜಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಈ ವಿಷಯ ತಿಳಿಸಿದರು. ಈ ಗ್ರಾಮಕ್ಕೆ ಸರ್ಕಾರಿ ಬಸ್ ಅವಶ್ಯಕತೆ ಇದೆ ಈಗಾಗಲೇ ಸಂಬಂಧಪಟ್ಟವರಿಗೆ ಪತ್ರ ಬರೆದಿದ್ದು ಮಾತನಾಡಿರುವೆ, ಶೀಘ್ರದಲ್ಲೇ ಬಸ್ ವ್ಯವಸ್ಥೆ ಕಲ್ಪಿಸುವುದಾಗಿ ಭರವಸೆ ನೀಡಿದರು. ಇಂದು ಸ್ಪರ್ಧಾತ್ಮಕ ಯುಗ ಇಂತಹ ಸ್ಪರ್ಧಾತ್ಮಕ ಯುಗಕ್ಕೆ ಸಂಬಂಧಿಸಿದಂತೆ ಮಕ್ಕಳನ್ನು ಸಿದ್ಧಗೊಳಿಸುವುದು ಅತ್ಯಂತ ಸವಾಲಿನ ಕೆಲಸವಾಗಿದೆ . ಇಂತಹ ಸನ್ನಿವೇಶದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಯಾದ ಎಲ್ ಜಯಪ್ಪ ಅವರ ನೇತೃತ್ವದ ತಂಡ ಮಕ್ಕಳಿಗೆ ಬೇಕಾದ ಸಂಪನ್ಮೂಲ ಸಾಹಿತ್ಯ ಕೈಪಿಡಿಗಳನ್ನು ರಚಿಸಿ ಸಮಯಕ್ಕೆ ಸರಿಯಾಗಿ ಮಕ್ಕಳಿಗೆ ನೀಡಿ ರಾಜ್ಯ ಮಟ್ಟದ ಸಂಪನ್ಮೂಲ ವ್ಯಕ್ತಿಗಳಿಂದ ತರಬೇತಿ ಕೊಡಿಸುತ್ತಿರುವುದು ಅತ್ಯಂತ ಹೆಮ್ಮೆಯ ವಿಚಾರ ಎಂದರು, ಇಂತಹ ಪರೀಕ್ಷೆಗಳಿಗೆ ಮಕ್ಕಳನ್ನು ಸಜ್ಜುಗೊಳಿಸುವುದರಿಂದ ಮುಂದಿನ ಎಲ್ಲಾ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಅತ್ಯುತ್ತಮವಾಗಿ ಎದುರಿಸಲು ಸಹಾಯಕವಾಗುತ್ತದೆ ಎಂದು ತಿಳಿಸಿದರು. ಕ್ಷೇತ್ರ ಶಿಕ್ಷಣಾಧಿಕಾರಿಯದ ಜಯಪ್ಪನವರು ಮಾತನಾಡಿ ಈ ಪರೀಕ್ಷೆಯನ್ನು ಸರ್ಕಾರಿ ಮತ್ತು ಅನುದಾನಿತ ಪ್ರೌಢಶಾಲೆಯ ಎಂಟನೇ ತರಗತಿ ವಿದ್ಯಾರ್ಥಿಗಳಿಗೆ ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಆಯೋಜಿಸಿ ಪ್ರತಿಭಾನ್ವಿತ ವಿದ್ಯಾರ್ಥಿಗಳನ್ನು ಗುರುತಿಸಿ ವಿದ್ಯಾರ್ಥಿ ವೇತನ ನೀಡುವುದರ ಮುಖಾಂತರ ಅವರ ಮುಂದಿನ ವಿದ್ಯಾಭ್ಯಾಸಕ್ಕೆ ನೆರವಾಗಲಿದ್ದು ಒಟ್ಟು ಪ್ರತಿ ತಿಂಗಳು 1,000 ದಂತೆ ನಾಲ್ಕು ವರ್ಷಗಳ ಕಾಲ 48000 ವಿದ್ಯಾರ್ಥಿ ವೇತನ ಪಡೆಯಲಿದ್ದಾರೆ ಈ ಬಗ್ಗೆ ಶಾಲೆಗಳಲ್ಲಿ ಹೆಚ್ಚು ತರಬೇತಿ ನೀಡುತ್ತಿದ್ದು ಹೆಚ್ಚಿನ ವಿದ್ಯಾರ್ಥಿಗಳು ಆಯ್ಕೆಯಾಗುವ ಭರವಸೆ ಇದೆ ಎಂದರು

ವಿಶ್ವ ವಿಕಲಚೇತನರ ದಿನಾಚರಣೆಯಲ್ಲಿ ಉಪವಿಭಾಗಾಧಿಕಾರಿ ಎಂ.ಕಾರ್ತೀಕ್ ಸಲಹೆ

# ವಿಶೇಷಚೇತನರು ಸಾಮರ್ಥ್ಯಕ್ಕನುಗುಣವಾಗಿ ದಿಟ್ಟ ಹೆಜ್ಜೆ ಇಡಿ, ಸಮಾಜದ ಮುಖ್ಯವಾಹಿನಿಗೆ ಬನ್ನಿ

» **ಚಿತ್ರದುರ್ಗ**

ವಿಶೇಷಚೇತನರು ಮುಖ್ಯವಾಗಿ ತಮ್ಮ ಸಾಮರ್ಥ್ಯದ ಮೇಲೆ ನಂಬಿಕೆ ಇಡಬೇಕು. ತಮ್ಮ ಸಾಮರ್ಥ್ಯಕ್ಕನುಗುಣವಾಗಿ ಪ್ರಯತ್ನ ಮಾಡುವ ಮೂಲಕ ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಉಪವಿಭಾಗಾಧಿಕಾರಿ ಎಂ.ಕಾರ್ತೀಕ್ ಸಲಹೆ ನೀಡಿದರು.

ನಗರದ ತರಾಸು ರಂಗಮಂದಿರದಲ್ಲಿ ಭಾನುವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘ ಸಂಸ್ಥೆಗಳು, ಗ್ರಾಮೀಣ ಪುನರ್ವಸತಿ ಯೋಜನೆಯ ಕಾರ್ಯಕರ್ತರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಕಲಚೇತನರು ತಮ್ಮ ಹಕ್ಕುಗಳು, ಅವಕಾಶಗಳನ್ನು ಅರ್ಥಮಾಡಿಕೊಂಡು, ಬಳಸಿಕೊಂಡು ತಾವು ಸಾಮಾನ್ಯರಂತೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂಬ ಉದ್ದೇಶದಿಂದ ವಿಕಲಚೇತನರ ದಿನ ಆಚರಣೆ ಮಾಡಲಾಗುತ್ತಿದೆ. ವಿಕಲಚೇತನರು ತಮ್ಮ ಸಾಮಾರ್ಥ್ಯದ ಮೇಲೆ ನಂಬಿಕೆ ಇಟ್ಟುಕೊಂಡಾಗ ಮಾತ್ರ ದಿಟ್ಟ ಹೆಜ್ಜೆಗಳನ್ನಿಡಲು ಸಾಧ್ಯವಾಗಲಿದೆ ಎಂದು ಹೇಳಿದರು.



ವಿಕಲಚೇತನರಕಲ್ಯಾಣಕ್ಕಾಗಿಪ್ರತ್ಯೇಕವಾಗಿ ಇಲಾಖೆಯನ್ನು ಸ್ಥಾಪಿಸಲಾಗಿದ್ದು, ವಿಕಲಚೇತನರನ್ನು ಮುಖ್ಯವಾಹಿನಿಗೆ ತರುವನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. "ವಿಕಲಚೇತನರಿಗಾಗಿ ವಿಕಲಚೇತನರೊಂದಿಗೆ ವಿಕಲಚೇತನರಿಂದ ಸುಸ್ಥಿರ ಅಭಿವೃದ್ಧಿ ಗುರಿಗಳನ್ನು ಸಂರಕ್ಷಿಸಲು ಮತ್ತು ಸಾಧಿಸಲು ಕಾರ್ಯ ಪ್ರವೃತ್ತರಾಗುವಿಕೆಯಲ್ಲಿ ಒಗ್ಗಟ್ಟು" ಎಂಬುವುದು ಈ ಬಾರಿಯ ವಿಶ್ವ ವಿಕಲಚೇತನರ ಘೋಷವಾಕ್ಯವಾಗಿದ್ದು, ಪ್ರತಿಯೊಬ್ಬರಿಗೂ ಸಮಾಜದಲ್ಲಿ ಸಮಾನವಾದ ಹಕ್ಕು ಇದೆ ಎಂದು ಹೇಳಿದರು.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಎಂ.ವಿ.ವೀಣಾ ಮಾತನಾಡಿ, 2011ರ ಜನಗಣತಿ ಪ್ರಕಾರ ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 35,971 ಜನ ವಿಕಲಚೇತನರು ಇದ್ದಾರೆ. ವಿಕಲಚೇತನರು ಮುಖ್ಯವಾಹಿನಿಗೆ ತರಲು, ಸಾಮಾನ್ಯರಂತೆ ಜೀವಿಸಲು ಅನುಕೂಲವಾಗುವಂತೆ ಎಲ್ಲಾ ರೀತಿಯ ಅಡೆತಡೆರಹಿತ ಸೌಲಭ್ಯ, ನೆರವು ನೀಡುವುದು ಸರ್ಕಾರದ ಹಾಗೂ ಸಮುದಾಯದ ಜವಾಬ್ದಾರಿ ಎಂದರು.

ವಿಕಲಚೇತನರಿಗೆ ರಾಜ್ಯ ಮತ್ತು ಕೇಂದ್ರ ಸರ್ಕಾರದ ವಿವಿಧ ಯೋಜನೆಗಳ ಮೂಲಕ ಸೌಲಭ್ಯಗಳನ್ನು ಒದಗಿಸಿ ಎಲ್ಲಾ ವಿಕಲಚೇತನರು ಮುಖ್ಯವಾಹಿನಿಗೆ ಬರುವಲ್ಲಿ ಹಲವಾರು ಕಾರ್ಯಕ್ರಮಗಳನ್ನು ಜಾರಿಗೆ ತಂದಿದೆ. ವಿಕಲಚೇತನರಿಗೆ ಮಾಸಿಕ ನಿರ್ವಹಣಾ ಭತ್ಯೆ, ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ಸಾಧನ ಸಲಕರಣೆ ಯೋಜನೆ, ಆಧಾರ ಯೋಜನೆ, ವಿಕಲಚೇತನ ವ್ಯಕ್ತಿಯನ್ನು ಸಾಮಾನ್ಯ ವ್ಯಕ್ತಿ ವಿವಾಹವಾದಲ್ಲಿ ಪ್ರೋತ್ಸಾಹಧನ, ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ, ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಶಿಶುಪಾಲನಾ ಭತ್ಯೆ, ತೀವ್ರತರನಾದ ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ದ್ವಿಚಕ್ರವಾಹನ ಯೋಜನೆ, ಎಸ್.ಎಸ್.ಎಲ್.ಸಿ. ಹಾಗೂ ನಂತರ ವ್ಯಾಸಂಗ ಮಾಡುತ್ತಿರುವ ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ ಟಾಪ್ ಹಾಗೂ ಬ್ರೆಲ್‌ಕಿಟ್ ಯೋಜನೆ, ಶ್ರವಣದೋಷವುಳ್ಳ ವಿಕಲಚೇತನರಿಗೆ ಹೊಲಿಗೆಯಂತ್ರ ಯೋಜನೆ, ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ, ಉದ್ಯೋಗಸ್ಥ ವಿಕಲಚೇತನ ಮಹಿಳೆಯರ ಮತ್ತು ವಿದ್ಯಾರ್ಥಿನಿಯರ ವಸತಿ ನಿಲಯ, ಅಂಗವಿಕಲರ ಗ್ರಾಮೀಣ ಪುನರ್ವಸತಿ ಯೋಜನೆ, ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ, ವಿಕಲಚೇತನರ ಸಹಾಯವಾಣಿ ಕೇಂದ್ರ, ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಡಿ ಬರುವ ಅಭಿವೃದ್ಧಿ ಯೋಜನೆಗಳಲ್ಲಿ ಶೇ.5ರಷ್ಟು ಅನುದಾನ ಮೀಸಲಾತಿ, ವಿಕಲಚೇತನ ವ್ಯಕ್ತಿಗಳಿಗೆ ರಿಯಾಯಿತಿ ಬಸ್ ಪಾಸ್ ವ್ಯವಸ್ಥೆ, ಉದ್ಯೋಗದಲ್ಲಿ ಮೀಸಲಾತಿ ಕಲ್ಪಿಸಲಾಗಿದೆ ಎಂದರು. ಇದೇ ಸಂದರ್ಭದಲ್ಲಿ 2022–23ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಪಡೆದ ವಿಕಲಚೇತನ ವಿದ್ಯಾರ್ಥಿಗಳಾದ ಮೊಳಕಾಲ್ಮೂರು ತಾಲ್ಲೂಕಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಎಂ ಕುಮಾರಸ್ವಾಮಿ, ಹೊಳಲ್ಕೆರೆ ತಾಲ್ಲೂಕಿನ ಶ್ರೀಮಂಜುನಾಥ ಪ್ರೌಢಶಾಲೆಯ ಆರ್ ಜೀವಿತ, ಚಿತ್ರದುರ್ಗ ತಾಲ್ಲೂಕಿನ ಸಿರಿಗೆರೆ ಬಿಎಲ್‌ಆರ್ ಜೂನಿಯರ್ ಕಾಲೇಜಿನ ಬಿ.ಎಸ್.ವರ್ಷಿಣಿ, ಚಳ್ಳಕೆರೆ ತಾಲ್ಲೂಕಿನ ಕಿತ್ತೂರು ರಾಣಿ ಚೆನ್ನಮ್ಮ ವಸತಿ ಶಾಲೆಯ ಆರ್.ನೀಲಾವತಿ, ಹೊಸದುರ್ಗ ತಾಲ್ಲೂಕಿನ ದಶರಥ ರಾಮೇಶ್ವರ ಪ್ರೌಢಶಾಲೆಯ ಜ್ಯೋತಿ, ಹಿರಿಯೂರು ತಾಲ್ಲೂಕಿನ ಜಿ.ಜೆ.ಸಿ ಯರಬಳ್ಳಿ ಶಾಲೆಯ ಆರ್.ವೃಂದರಾಜ್ ಅವರನ್ನು ಸನ್ಮಾನಿಸಲಾಯಿತು.


ಪುಟ 2


## ಬಿಜೆಪಿ ಮೊಳಕಾಲ್ಮುರು ಮಂಡಲದಿಂದ ವಿಜಯೋತ್ಸವ

» **ಮೊಳಕಾಲ್ಮುರು**

ಪಂಚ ರಾಜ್ಯ ಚುನಾವಣೆಯಲ್ಲಿ 3 ರಾಜ್ಯಗಳಲ್ಲಿ ಬಿಜೆಪಿಯ ಅಭೂತಪೂರ್ವ ವಿಜಯದ ಹಿನ್ನೆಲೆಯಲ್ಲಿ ಪಟ್ಟಣದ ಖಾಸಗಿ ಬಸ್ ನಿಲ್ದಾಣದಲ್ಲಿ ಪಟಾಕಿ ಸಿಡಿಸಿ ಕಾರ್ಯಕರ್ತರಿಗೆ ಸಿಹಿ ವಿತರಿಸಿ ವಿಜಯೋತ್ಸವ ಆಚರಿಸಲಾಯಿತು.

ಈ ಸಂದರ್ಭದಲ್ಲಿ ಪಟ್ಟಣ ಪಂಚಾಯತಿ ಮಾಜಿ ಅಧ್ಯಕ್ಷರುಗಳಾದ ಶ್ರೀ ಯುತ ಟಿ.ಟಿ.ರವಿ ಮತ್ತು ಪಿ. ಲಕ್ಷಣ ಮತ್ತು ಪಟ್ಟಣ ಪಂಚಾಯತಿ ಉಪಾಧ್ಯಕ್ಷರು ಬಿ.ಮಂಜಣ್ಣ ನಗರ ಘಟಕದ ಅಧ್ಯಕ್ಷರಾದ ಶ್ರೀ ಯುತ ಕಿರಣ್ ಗಾಯಕ್ವಾಡ್ ಮತ್ತು ಜಿಲ್ಲಾ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿಗಳು ಸೂರಮ್ಮನಹಳ್ಳಿ ನಾಗರಾಜ್, ಮಂಡಲದ ಪ್ರಧಾನ ಕಾರ್ಯದರ್ಶಿ ಎನ್.ಪಿ.ಪ್ರಭಾಕರ ಹಾಗೂ ಯುವ ಮೋರ್ಚಾ ಅಧ್ಯಕ್ಷರಾದ ಶ್ರೀ ಯುತ ಹರೀಶ್ ಕಡೆತೋಟ , ಮತ್ತು ಕುಮಾರಸ್ವಾಮಿ ,ಪಟ್ಟಣ ಪಂಚಾಯತಿ ಸದಸ್ಯರು ಭಾಗ್ಯಮ್ಮ ಬೀಮಣ್ಣ , ಶುಭ ಪ್ರಥ್ವಿ ರಾಜ್ ,ಸಿದ್ದಣ್ಣ,ಶಿವಕುಮಾರ್ ಕೇರೆ, ಹೇಮಂತ್ ,ಹರೀಶ್ ಪಾಳೇಗಾರ, ಬಸವರಾಜ,ವಾರಣ್ಣ,ಜಿಂದೆ ಪಕೀರಪ್ಪ,ಮತ್ತು ಮಂಡಲದ ಉಪಾಧ್ಯಕ್ಷರು ಮತ್ತು ಕಾರ್ಯದರ್ಶಿಗಳು, ಮೋರ್ಚಾ ಅಧ್ಯಕ್ಷರು ಮತ್ತು ಪ್ರಧಾನ ಕಾರ್ಯದರ್ಶಿಗಳು ಹಾಗೂ ಚುನಾಯಿತ ಪ್ರತಿನಿಧಿಗಳು ಮತ್ತು ಬೂತ್ ಅಧ್ಯಕ್ಷರು ಹಾಗೂ ಬಿಜೆಪಿ ಪಕ್ಷದ ಕಾರ್ಯಕರ್ತರು ಪ್ರಮುಖರು ಉಪಸ್ಥಿತರಿದ್ದರು.



## ಜಿಲ್ಲಾಧಿಕಾರಿಗಳ ಆಡಳಿತ ವೈಫಲ್ಯವಾಗಿದೆ: ಶಾಸಕ ಬಿ.ಜಿ.ಗೋವಿಂದಪ್ಪ ಆಕ್ರೋಶ

» **ಹೊಸದುರ್ಗ**



ಸರ್ಕಾರ ಜಿಲ್ಲೆಯಲ್ಲಿ ಬರಗಾಲ ಘೋಷಣೆ ಮಾಡಿದೆ. ಯಾವ ರೈತರ ಬಳಿಯೂ ರಾಗಿಯಿಲ್ಲ ಹೀಗಿರುವಾಗ ಜಿಲ್ಲಾಧಿಕಾರಿಗಳು ಯಾವುದೇ ಜನಪ್ರತಿನಿಧಿಗಳು ಹಾಗೂ ಕೃಷಿ ಅಧಿಕಾರಿಗಳ ಸಲಹೆ ಸೂಚನೆ ನೀಡಿದೆ, ಏಕಾಏಕಿ ರಾಗಿ ಖರೀದಿ ಕೇಂದ್ರ ಆರಂಭಿಸಲು ಸಭೆಯಲ್ಲಿ ತೀರ್ಮಾನ ಕೈಗೊಂಡಿದ್ದಾರೆ. ಜಿಲ್ಲಾಧಿಕಾರಿಗಳ ಆಡಳಿತ ವೈಫಲ್ಯದಿಂದ ಕೂಡಿದೆ ಎಂದು ಶಾಸಕ ಬಿ.ಜಿ.ಗೋವಿಂದಪ್ಪ ಆಕ್ರೋಶ ವ್ಯಕ್ತಪಡಿಸಿದರು. ಪಟ್ಟಣದ ಪ್ರವಾಸಿ ಮಂದಿರದಲ್ಲಿ ಶನಿವಾರ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಸರ್ಕಾರ ಬೇರೆ ಅಧ್ಯಯನ ನಡೆಸಿ, ಪರಿಹಾರ ನೀಡಲು ಮುಂದಾಗಿದೆ.


ಪುಟ 2


**ಪ್ರಮುಖ ಸುದ್ದಿ**

4000 ವಿಶೇಷ ಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನ: ಸಿದ್ದರಾಮಯ್ಯ

# ವಿಕಲಚೇತನರು ಸಮಾಜಕ್ಕೆ ಹೊರೆ ಅಲ್ಲ: ಸಿಎಂ

» **ಬೆಂಗಳೂರು**

2023–24ನೇ ಸಾಲಿನಲ್ಲಿ 4000 ವಿಶೇಷ ಚೇತನರಿಗೆ ಯಂತ್ರಚಾಲಿತ ದ್ವಿಚಕ್ರ ವಾಹನಗಳನ್ನು ವಿತರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಅವರು ಇಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಮತ್ತು ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ವತಿಯಿಂದ ವಿಶ್ವ ವಿಕಲಚೇತನರ ದಿನಾಚರಣೆ 2023 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಇಂದು ವಿಶ್ವ ವಿಕಲಚೇತನರ ದಿನ. 2011ರ ಜನಗಣತಿಯ ಪ್ರಕಾರ ರಾಜ್ಯದಲ್ಲಿ 13,24,205 ವಿಕಲಚೇತನರಿದ್ದಾರೆ. ವಿಕಲಚೇತನರು ಸಮಾಜಕ್ಕೆ ಹೊರೆ ಅಲ್ಲ. ಅವರೂ ಕೂಡ ಬೇರೆಯವರಂತೆ ಈ ಸಮಾಜದಲ್ಲಿ ಎಲ್ಲ ಅವಕಾಶಗಳನ್ನು ಪಡೆದು ಉದ್ಯೋಗ, ಬದುಕಿಗೆ ಹಕ್ಕುಗಳನ್ನು ಪಡೆದಿದ್ದಾರೆ. ವಿಕಲಚೇತನರಿಗೆ ಶಿಕ್ಷಣ ಉದ್ಯೋಗಗಳಲ್ಲಿ ಸಮಾನ ಅವಕಾಶ ದೊರಕಿಸುವುದು ಸರ್ಕಾರದ ಕರ್ತವ್ಯ ಎಂದರು.

ಇತ್ತೀಚೆಗೆ ನಡೆಸಲಾದ ಜನಸ್ಪಂದನ ಕಾರ್ಯಕ್ರಮದಲ್ಲಿ ಬಹಳಷ್ಟು ಸಂಖ್ಯೆಯಲ್ಲಿ ವಿಕಲಚೇತನರು ಆಗಮಿಸಿದ್ದರು. ಉದ್ಯೋಗ, ಶಿಕ್ಷಣ ಹಾಗೂ ವಾಹನ ಖರೀದಿಗೆ ನೆರವು ಸೇರಿದಂತೆ ಹಲವು ಬೇಡಿಕೆಗಳಿಗೆ ಸಂಬಂಧಪಟ್ಟ ಇಲಾಖೆಯು ಕ್ರಮ ಕೈಗೊಳ್ಳಲು ಸೂಚನೆ ನೀಡಲಾಗಿದೆ. ಪ್ರಸಕ್ತ ಸಾಲಿನಲ್ಲಿ 10 ಬುದ್ಧಿಮಾಂದ್ಯ ಮಕ್ಕಳ ವಸತಿ ಶಾಲೆಗಳನ್ನು 2 ಕೋಟಿ ವೆಚ್ಚದಲ್ಲಿ ಏಳು ಜಿಲ್ಲೆಗಳಲ್ಲಿ ನಿರ್ಮಿಸುವ ಯೋಜನೆ ಹಮ್ಮಿಕೊಳ್ಳಲಾಗಿದೆ. ವಿಕಲಚೇತನರ ಶೈಕ್ಷಣಿಕ, ವೈದ್ಯಕೀಯ, ಪುನರ್ವಸತಿ, ಹಿರಿಯ ನಾಗರಿಕ ಕ್ಷೇಮಾಭಿವೃದ್ಧಿಗಾಗಿ 284.27ಕೋಟಿ ರೂ. ಇಡಲಾಗಿದೆ. ಮರಣ ಹೊಂದಿದ ವಿಕಲಚೇತನರಿಗೆ ಪರಿಹಾರವನ್ನು 50 ಸಾವಿರದಿಂದ 1 ಲಕ್ಷಕ್ಕೆ ಏರಿಸಲಾಗಿದೆ. ಇತ್ತೀಚಿನ ದಿನಗಳಲ್ಲಿ ವಿಕಲಚೇತನರು ಕ್ರೀಡೆಯೂ ಸೇರಿದಂತೆ ಎಲ್ಲ ರಂಗಗಳಲ್ಲಿ ಅಪ್ರತಿಮ ಸಾಧನೆ ತೋರುತ್ತಿದ್ದಾರೆ. ಆದ್ದರಿಂದ ವಿಕಲಚೇತನರು ಸಮಾಜಕ್ಕೆ ಹೊರೆ ಎನ್ನುವ ಸಮಾಜದಲ್ಲಿರುವ ಭಾವನೆಯನ್ನು ದೂರ ಮಾಡಬೇಕಿದೆ ಎಂದರು.







## ಫಾಸ್ಟ್ ನ್ಯೂಸ್

### ವಿಶೇಷಚೇತನರು ಸಾಮರ್ಥ್ಯಕ್ಕನುಗುಣವಾಗಿ ದಿಟ್ಟ ಹೆಜ್ಜೆ ಇಡಿ, ಸಮಾಜದ ಮುಖ್ಯವಾಹಿನಿಗೆ ಬನ್ನಿ

» ಮೊದಲ ಪುಟದಿಂದ

ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಜಿಲ್ಲಾ ಮಟ್ಟದಲ್ಲಿ ಆಯೋಜಿಸಲಾಗಿದ್ದ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಭಾಗವಹಿಸಿ ವಿಜೇತರಾದ ವಿಕಲಚೇತನರಿಗೆ ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್, ನಿರೂಪಣಾಧಿಕಾರಿ ವಿಜಯಕುಮಾರ್, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಸುಧಾ, ಸಹಾಯಕ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳಾ ಮಂಜುಳಾ, ಮಾರುತಿ, ಜಿಲ್ಲಾ ಅಂಗವಿಕಲರ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಶ್ರೀನಿವಾಸ್, ನಿವೃತ್ತ ದೈಹಿಕ ಶಿಕ್ಷಣಾಧಿಕಾರಿ ಜಯಣ್ಣ ಸೇರಿದಂತೆ ಎಂಆರ್‌ಡಬ್ಲ್ಯೂ, ವಿಆರ್‌ಡಬ್ಲ್ಯೂ, ಯುಆರ್‌ಡಬ್ಲ್ಯೂ ಕಾರ್ಯಕರ್ತರು, ವಿವಿಧ ಇಲಾಖೆ ಅಧಿಕಾರಿಗಳು, ವಿಕಲಚೇತನರು ಇದ್ದರು.

### ಜಿಲ್ಲಾಧಿಕಾರಿಗಳ ಆಡಳಿತ ವೈಫಲ್ಯವಾಗಿದೆ: ಶಾಸಕ ಗೋವಿಂದಪ್ಪ ಆಕ್ರೋಶ

» ಮೊದಲ ಪುಟದಿಂದ

ಜಿಲ್ಲಾಧಿಕಾರಿ ಹಾಗೂ ಆಹಾರ ಇಲಾಖೆ ಅಧಿಕಾರಿಗಳು, ಕೃಷಿ ಇಲಾಖೆಯಲ್ಲಿ ಕಳೆದ ಬಾರಿ ಸುರಿದ ವಾಡಿಕೆ ಮಳೆ, ಈ ಬಾರಿಯಾದ ಮಳೆ, ರಾಗಿ ಬಿತ್ತನೆ ಬೀಜ ನೀಡಿದ ಬಗ್ಗೆ ಮಾಹಿತಿ, ಬಿತ್ತನೆ ಮಾಡಿರುವ ರೈತರು, ಅವರ ಸ್ಥಿತಿ, ಕಟಾವು ಆಗಿರುವ ರಾಗಿ ಸೇರಿದಂತೆ ಹಲವು ಅಂಶಗಳನ್ನು ಪರಿಶೀಲಿಸಿ ನಂತರ ಮುಂದಿನ ಕಾರ್ಯಗಳಿಗೆ ಒತ್ತು ನೀಡಬೇಕಾಗಿತ್ತು. ಆದರೆ ತಮ್ಮ ಕರ್ತವ್ಯ ಮರೆತು, ಪ್ರತಿಷ್ಠೆಗಾಗಿ ಏಕಾಏಕಿ ನಿರ್ಧಾರ ಕೈಗೊಂಡಿದ್ದಾರೆ ಎಂದು ದೂರಿದರು. ಈ ಹಿಂದೆ ಹೊಸದುರ್ಗದಲ್ಲಿ ರಾಗಿ ಖರೀದಿ ಕೇಂದ್ರದಲ್ಲಿ ಅವ್ಯವಹಾರ, ಅಧಿಕಾರಿಗಳ ವಿರುದ್ಧ ಎ[illegible]ಆರ್ ದಾಖಲಿಸಿದ್ದು, ಅದರ ತನಿಖೆ ಹಂತ ಯಾವುದು ಪೂರ್ಣಗೊಂಡಿಲ್ಲ. ತಾಲ್ಲೂಕಿನ ರೈತರಿಗೆ ಇನ್ನೂ ರಾಗಿ ಹಣ ಸಂದಾಯವಾಗಿಲ್ಲ. ಇದನ್ನೆಲ್ಲಾ ಮರೆತ ಜಿಲ್ಲಾಧಿಕಾರಿಗಳು ರಾಗಿ ಖರೀದಿ ಪ್ರಾರಂಭ ಮಾಡಲು ಹೊರಟಿರುವುದು ವಿಪರ್ಯಾಸವಾಗಿದೆ. ತಾಲ್ಲೂಕಿನ ರೈತರು ಹಣ ನೀಡದೆ, ರಾಗಿ ಖರೀದಿ ಆರಂಭಿಸಲು ಬಿಡುವುದಿಲ್ಲ. ರಾಗಿ ಖರೀದಿ ಕೇಂದ್ರ ಮಾಡಲೇ ಬೇಕಿದ್ದರೆ, ಮೊದಲು ತಾಲ್ಲೂಕಿನ ರೈತರಿಗೆ ಹಣ ಪಾವತಿಸಿ. ಮೂರು ಬಾರಿ ಆಹಾರ ನಿಗಮದ ಇಲಾಖೆ ಬಳಿ ಮನವಿ ಮಾಡಿದರೂ ಹಣ ಬಿಡುಗಡೆ ಮಾಡಿಲ್ಲ, ರೈತರು ಸಂಕಷ್ಟದಲ್ಲಿದ್ದಾರೆ. ಇಂತಹ ಸಂದರ್ಭದಲ್ಲಿ ಅಧಿಕಾರಿಗಳು ಜವಾಬ್ದಾರಿ ಮರೆತಿದ್ದಾರೆ.ರೈತರು ಹಾಗೂ ಕೃಷಿ ಇಲಾಖೆ ಜೊತೆ ಸಭೆ ನಡೆಸಿ, ವಾಸ್ತವ ಅರಿತುಕೊಳ್ಳಬೇಕು. ಬಾರ ಪರಿಹಾರ ಬಂದಿಲ್ಲ ಇನ್ಸೂರೆನ್ಸ್ ದೊರೆತಿಲ್ಲ, ಈ ವಿಚಾರಗಳ ಬಗ್ಗೆ ಗಮನಹರಿಸಿ, ನಂತರ ಮುಂದಿನ ತೀರ್ಮಾನ ಕೈಗೊಳ್ಳಿ. ಬೆಳಗಾವಿಯಲ್ಲಿ ನಡೆಯುವ ಅಧಿವೇಶನದಲ್ಲಿ ಈ ಬಗ್ಗೆ ಧ್ವನಿ ಎತ್ತಲಾಗುವುದು ಎಂದರು. ರೈತರು ಬೆಳೆದಿರುವ ರಾಗಿ ಕುರಿತು ಕೃಷಿ ಇಲಾಖೆ ಬಳಿ ದೃಢೀಕರಣ ತೆಗೆದುಕೊಳ್ಳಬೇಕು. ರೈತರ ಬಳಿ ರಾಗಿಯಿಲ್ಲ. ಹೀಗಿರುವಾಗ ಯಾರೂ ಮಧ್ಯಸ್ಥಗಾರರಿಗೆ ಅನುಕೂಲವಾಗಲೆಂದು ಜಿಲ್ಲಾಧಿಕಾರಿಗಳು ಈ ತೀರ್ಮಾನ ಕೈಗೊಂಡಿರಬಹುದು. ರಾಗಿ ಖರೀದಿ ಕೇಂದ್ರ ಆರಂಭದಿಂದ ರೈತರಿಗೆ ಉಪಯೋಗವಿಲ್ಲ, ಕೇಂದ್ರದ ಅವಶ್ಯಕತೆಯೂ ಸಹ ಇಲ್ಲ ಇದನ್ನು ಇಲ್ಲಿಗೆ ನಿಲ್ಲಿಸಿ ಎಂದರು.

### ಅವಧಿ ವಿಸ್ತರಣೆ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಸ್ವಯಂ ಉದ್ಯೋಗ ಯೋಜನೆ(ನೇರಸಾಲ), ಐ.ಎಸ್.ಬಿ. ಯೋಜನೆ ಹಾಗೂ ಗಂಗಾ ಕಲ್ಯಾಣ ಯೋಜನೆಗಳ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸಲು ಡಿಸೆಂಬರ್ 15 ರವರೆಗೆ ಅವಧಿ ವಿಸ್ತರಿಸಲಾಗಿದೆ ಎಂದು ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಮಹಾವೀರ ತಿಳಿಸಿದ್ದಾರೆ.

### ನಗರದಲ್ಲಿ ಬಾಲ ಕಾರ್ಮಿಕ ಪತ್ತೆ

» ದಾವಣಗೆರೆ

ಡಿಸೆಂಬರ್ 2 ರಂದು ಪ್ಯಾನ್ ಇಂಡಿಯಾ ರಕ್ಷಣೆ ಮತ್ತು ಪುನರ್ವಸತಿ ಆಂದೋಲನದ ಅಂಗವಾಗಿ ದಾವಣಗೆರೆ ನಗರದಲ್ಲಿ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಹಾಗೂಬಾಲ್ಯಾವಸ್ಥೆ&ಕಿಶೋರಾವಸ್ಥೆ (ನಿಷೇಧ ಮತ್ತು ನಿಯಂತ್ರಣ) ತಿದ್ದುಪಡಿ ಕಾಯ್ದೆ ಕುರಿತು ವಿವಿಧ ಅಂಗಡಿ, ಹೋಟೆಲ್, ಗ್ಯಾರೇಜ್ ಹಾಗೂ ವಾಣಿಜ್ಯ ಸಂಸ್ಥೆಗಳಿಗೆ ಶನಿವಾರ ಭೇಟಿ ನೀಡಿ ಅಧಿಕಾರಿಗಳು ಬಾಲ ಹಾಗೂ ಕಿಶೋರಾವಸ್ಥೆ ಕಾರ್ಮಿಕರ ತಪಾಸಣೆ ನಡೆಸಿ, ತಪಾಸಣೆಯಲ್ಲಿ ಒಬ್ಬ ಕಿಶೋರ ಕಾರ್ಮಿಕ ಅಪಾಯಕಾರಿ ಉದ್ದಿಮೆಯಲ್ಲಿ ಪತ್ತೆಯಾಗಿದ್ದು,ಪತ್ತೆಯಾದಕಿಶೋರಕಾರ್ಮಿಕನನ್ನು ಕೆಲಸದಿಂದ ಬಿಡುಗಡೆಗೊಳಿಸಿ ಮಕ್ಕಳ ಕಲ್ಯಾಣ ಸಮಿತಿಗೆ ಹಾಜರುಪಡಿಸಿ ಮಾಲೀಕರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗಿದೆ. ಹಾಗೂ ಮಾಲೀಕರಿಗೆ ಕರಪತ್ರ & ಸ್ಟಿಕರ್ಸ್ ನೀಡಿ ಜಾಗೃತಿ ಮೂಡಿಸಿದರು. ಕಾರ್ಮಿಕ ನಿರೀಕ್ಷಕರಾದ ರಾಜಶೇಖರ ಹಿರೇಮಠ್, ರಾಜಪ್ಪ.ಟಿ, ನಾಗೇಶ್ ಹಾಗೂ ಯೋಜನಾ ನಿರ್ದೇಶಕ ಪ್ರಸನ್ನ ಇ.ಎನ್ ಉಪಸ್ಥಿತರಿದ್ದರು.


### ಅದ್ದೂರಿ ಮೆರವಣಿಗೆ ಸಾಂಸ್ಕೃತಿಕ ಕಾರ್ಯಕ್ರಮಗಳ ಮೆರಗು

# ಕುರುಬರಳ್ಳಿಯಲ್ಲಿ ಸುವರ್ಣ ಕರ್ನಾಟಕ ಸಂಭ್ರಮ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕು ಕುರುಬರಹಳ್ಳಿ ಸರ್ಕಾರಿ ಪ್ರೌಢಶಾಲೆಯಲ್ಲಿ ಈಚೆಗೆ 50ನೇ ಸುವರ್ಣ ಕರ್ನಾಟಕ ಸಂಭ್ರಮ ಮಹೋತ್ಸವದ ಕಾರ್ಯಕ್ರಮ ಅದ್ದೂರಿಯಾಗಿ ಜರುಗಿತು. ಊರಿನ ಪ್ರಮುಖ ಬೀದಿಗಳಲಿ ಕನ್ನಡದ ಕವಿಗಳು, ವಚನಕಾರರು, ಕೀರ್ತನಕಾರರ ಭಾವಚಿತ್ರಗಳಮೆರವಣಿಗೆಮಾಡಲಾಯಿತು. ಮಕ್ಕಳಯಿಂದ ಜರುಗಿದ ಸಾಂಸ್ಕೃತಿಕ ಕಾರ್ಯಕ್ರಮಗಳು ಸುವರ್ಣ ಕರ್ನಾಟಕ ಸಂಭ್ರಮಕ್ಕೆ ಮೆರಗು ತಂದವು.





ಶಾಲೆಯಲ್ಲಿ ಜರುಗಿದ ವೇದಿಕೆ ಕಾರ್ಯಕ್ರಮದಲ್ಲಿ ಕ್ಷೇತ್ರ ಶಿಕ್ಷಣಧಿಕಾರಿ ನಾಗಭೂಷನ್ ಮಾತನಾಡಿ ಧರ್ಮ ಜಾತಿ ಬೇಧ ಮರೆತು ಪ್ರತಿಯೊಬ್ಬರು ಕನ್ನಡ ನಾಡು ನುಡಿ ರಕ್ಷಣಗೆ ತೊಡಗಬೇಕು. ಸರ್ಕಾರಿ ಶಾಲೆಗಳು ಸದಾ ಪೋಷಕರು, ಎಸ್.ಡಿ.ಎಂ.ಸಿ ಹಾಗೂ ಸಾರ್ವಜನಿಕರೊಂದಿಗೆ ಉತ್ತಮ ಸಂಬಂಧ ಹೊಂದಿರಬೇಕು ಎಂದರು.

ಸಂತೆಬೆನ್ನೂರು ಪಾಯಜ್ನಟರಾಜ್ ಕನ್ನಡ ನಾಡು ನುಡಿಯ ಬಗ್ಗೆ ಉಪನ್ಯಾಸ ನೀಡಿ ಕನ್ನಡ ನಾಡು ನುಡಿಯ ಇತಿಹಾಸದೊಂದಿಗೆ ಭಾಷೆ ಉಳಿಸಿ ಬೆಳೆಸಲು ಎಲ್ಲರು ಸಂಕಲ್ಪ ಮಾಡಬೇಕು. ಶಿಕ್ಷಣ ಮಕ್ಕಳಿಗೆ ಸಂಸ್ಕಾರ ನೀಡುವಂತಿರಬೇಕು ಎಂದರು.







ಕನ್ನಡ ವಿಷಯ ಪರಿವಿಕ್ಷಕ ಶಿವಣ್ಣ ಮಾತನಾಡಿ ಕನ್ನಡ ಭಾಷೆಯ ಸೊಬಗು, ಸಾಹಿತ್ಯದ ಹಿರಿಮೆ ದೊಡ್ಡದು. ಪ್ರಸ್ತುತ ದಿನಮಾನಗಳಲ್ಲಿ ಮಕ್ಕಳ ಕಲಿಕಾ ಮಾತೃಭಾಷೆ ಕಲಿಕೆಗೆ ಆದ್ಯತೆ ನೀಡಬೇಕು ಎಂದರು.

ಶಾಲೆಯ ಎಸ್.ಡಿ.ಎಂಸಿ ಅಧ್ಯಕ್ಷ ನಯಾಜ್ ಅಹಮದ್ ಖಾನ್ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ವಿವಿಧ ಇಲಾಖೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಾಲೆಯ ಹಳೆ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಇದರೊಂದಿಗೆ ಕಳೆದ ವರ್ಷ ಹತ್ತನೇ ತರಗತಿಯಲ್ಲಿ ಅತೀ ಹೆಚ್ಚು ಅಂಕ ಪಡೆದ ವಿದ್ಯಾರ್ಥಿಗಳಿಗೆ ಸನ್ಮಾನಿಸಲಾಯಿತು.

ಮುಖ್ಯ ಶಿಕ್ಷಕ ಪತಾವುದ್ದಿನ್ ಶಾಕೀರ್ ಸ್ವಾಗತಿಸಿದರು. ಶಿಕ್ಷಕಿ ಶಾಂತಮ್ಮ ಪ್ರಸ್ತಾವಿಕೆ ನುಡಿಗಳನ್ನಾಡಿದರು.


ಕಾರ್ಯಕ್ರಮದಲ್ಲಿ ಹುಲ್ಲೂರು ಗ್ರಾಮ ಪಂಚಾಯತಿ ಅಧ್ಯಕ್ಷೆ ಸವಿತಾ.ಡಿ.ಎಂ, ಶಾಲೆಯ ಶಿಕ್ಷಕರಾದ ಸಯ್ಯದ್ ತಬಸುಮ್ ಉನ್ನಿಸ, ಇಂದಿರಾ ಜಿ, ಗೀತಾ ಪಿ, ವನಿತ ಬಿ ವಿ, ಅಫ್ರೋಜ್ ಬಾನು, ಪರ್ಜನಾ ಬೇಗಂ,ನಾಹೀದ ಅಲ್ಮಾಸ್, ಗೀತಾ ಆರ್, ನಗೀನ ಕಾತುಂ, ಸ್ಥಳೀಯ ಗ್ರಾಮ ಪಂಚಾಯತಿ ಸದಸ್ಯರು, ಎಸ್.ಡಿ.ಎಂ.ಸಿ ಎಲ್ಲಾ ಸದಸ್ಯರು ಊರಿನ ಹಿರಿಯರು ಪೋಷಕರು ಉಪಸ್ಥಿತರಿದ್ದರು.

ವಿದ್ಯಾರ್ಥಿಗಳಾದ ಶಶಿಕಲಾ. ಕೆ.ಎಸ್ ಮತ್ತು ಪಲ್ಲವಿಕೆ.ಬಿ ನಿರೂಪಣೆ ನೆರವೇರಿಸಿಕೊಟ್ಟರು. ಹಿಂದಿ ಶಿಕ್ಷಕ ದತ್ತಾತ್ರೆಯ ರಂಗಸುಭೆ ವಂದನಾರ್ಪಣೆ ಮಾಡಿದರು. ಕನ್ನಡ ಶಿಕ್ಷಕ ವಿಜಯ ಕುಮಾರ.ಕೆ.ಬಿ, ವೃತ್ತಿ ಶಿಕ್ಷಕ ಮಹಾಲಿಂಗಪ್ಪ. ಎಸ್.ಟಿ ಕಾರ್ಯಕ್ರಮದ ಉಸ್ತುವಾರಿ ನಿರ್ವಹಿಸಿದರು.

### ವಿಚಾರ ಸಂಕಿರಣ ಮತ್ತು ಸಂವಾದ ಕಾರ್ಯಕ್ರಮದಲ್ಲಿ ಡಾ.ಅಮಿತವ ಪರ್ಮಾಣಿಕ್

# ಗ್ರಾಮೀಣರ ಆದಾಯ ಹೆಚ್ಚಿಸಲು ಕಾರ್ಯಕ್ರಮ

» ಚಿತ್ರದುರ್ಗ



ಗ್ರಾಮೀಣ ಪ್ರದೇಶದ ಜನರು ಹಳ್ಳಿಗಳಲ್ಲಿಯೇ ತಮ್ಮ ಬುದ್ಧಿವಂತಿಕೆ ಉಪಯೋಗಿಸಿಕೊಂಡು ಹೊಸ ಉತ್ಪನ್ನಗಳ ತಯಾರಿಸಿ, ಹಣ ಗಳಿಸುವುದು ಹೇಗೆ ಎಂಬುದನ್ನು ತಿಳಿಸಲು ಭಾರತೀಯ ವಿಜ್ಞಾನ ಸಂಸ್ಥೆಯು ಹಲವಾರು ಕಾರ್ಯಕ್ರಮಗಳನ್ನು ಆಯೋಜಿಸುತ್ತಿದ್ದು, ರೈತರು ಇಂತಹ ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಸದುಪಯೋಗ ಪಡಿಸಿಕೊಳ್ಳಬೇಕು ಎಂದು ಬೆಂಗಳೂರಿನ ಸೊಸೈಟಿ ಫಾರ್ ಇನ್ನೋವೇಷನ್ ಅಂಡ್ ಡೆವಲಪ್‌ಮೆಂಟ್‌ನ ವಿಭಾಗೀಯ ಮುಖ್ಯಸ್ಥ ಡಾ.ಅಮಿತವ ಪರ್ಮಾಣಿಕ್ ತಿಳಿಸಿದರು.

ಚಳ್ಳಕೆರೆ ತಾಲ್ಲೂಕಿನ ಕುದಾಪುರ ಭಾರತೀಯ ವಿಜ್ಞಾನ ಸಂಸ್ಥೆಯ ಕೌಶಲ್ಯ ಅಭಿವೃದ್ಧಿ ಕೇಂದ್ರದಲ್ಲಿ ಶನಿವಾರಸೊಸೈಟಿಫಾರ್ ಇನ್ನೋವೇಷನ್‌ಅಂಡ್ ಡೆವಲಪ್‌ಮೆಂಟ್, ಭಾರತೀಯ ವಿಜ್ಞಾನ ಸಂಸ್ಥೆ ಇವರ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ "ರೈತರ ಕೃಷಿ ಆದಾಯ ಹೆಚ್ಚಿಸುವಲ್ಲಿ ನೈಸರ್ಗಿಕ ನಾರುಗಳಾದ ಬಾಳೆ, ಕತ್ತಾಳೆ, ಅಡಿಕೆ ಹಾಗೂ ಕುರಿ ಉಣ್ಣೆಗಳ ಮೌಲ್ಯವರ್ದನೆಯ ಪಾತ್ರ" ಕುರಿತು ಒಂದು ದಿನದ ವಿಚಾರ ಸಂಕಿರಣ ಮತ್ತು ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಸೊಸೈಟಿ ಫಾರ್ ಇನ್ನೋವೇಷನ್ ಅಂಡ್ ಡೆವಲಪ್‌ಮೆಂಟ್ ವತಿಯಿಂದ ರೈತರಿಗಾಗಿ ಸಾಕಷ್ಟು ಕಾರ್ಯಕ್ರಮಗಳನ್ನು ಮಾಡಲಾಗಿದೆ. ರೈತರ ಆದಾಯ ದ್ವಿಗುಣಗೊಳಿಸುವ ನಿಟ್ಟಿನಲ್ಲಿ ಸಂಪನ್ಮೂಲ ವ್ಯಕ್ತಿಗಳಿಂದ ಗ್ರಾಮೀಣ ಜನರಿಗೆ ಮಾಹಿತಿ ಹಾಗೂ ನೆರವು ನೀಡಲಾಗುತ್ತಿದೆ. ಈ ಕಾರ್ಯಕ್ರಮದ ಸದ್ಬಳಕೆ ಮಾಡಿಕೊಂಡು, ರೈತರು ಉದ್ಯಮ ಸ್ಥಾಪಿಸಬೇಕು. ಈ ನಿಟ್ಟಿನಲ್ಲಿ ರೈತರಿಗೆ ನಿರಂತರವಾಗಿ ಸಹಾಯ ಮಾಡಲಾಗುವುದು ಎಂದರು.

ಮುಂದುವರೆದ ರಾಷ್ಟ್ರಗಳಲ್ಲಿ ಸಾಕಷ್ಟು ಹಣವಿದೆ. ಹಾಗಾಗಿ ಅವರನ್ನು ಮುಂದುವರೆದ ರಾಷ್ಟ್ರಗಳು ಎಂದು ಕರೆಯುತ್ತೇವೆ. ಆದರೆ ನಮ್ಮ ಬಳಿ ಹಣ ಇಲ್ಲ. ಅವರಲ್ಲಿ ಡಾಲರ್ ಇದೆ, ನಮ್ಮಲ್ಲಿ ರೂಪಾಯಿ. ಡಾಲರ್ ಮೌಲ್ಯಕ್ಕೂ ರೂಪಾಯಿ ಮೌಲ್ಯಕ್ಕೂ ಬಹಳಷ್ಟು ಅಂತರವಿದೆ. ಹಾಗಾಗಿ ನಮ್ಮ ದೇಶ ಮುಂದುವರೆಯುತ್ತಿರುವ ದೇಶವಾಗಿದೆ. ಅಂದಮಾತ್ರಕ್ಕೆ ಬುದ್ಧಿವಂತಿಕೆಯಲ್ಲಿ ನಮ್ಮ ದೇಶ ಹಿಂದುಳಿದಿಲ್ಲ, ಆದರೆ ನಾವು ನಮ್ಮ ಬುದ್ಧಿವಂತಿಕೆಯನ್ನು ಸಂಪೂರ್ಣವಾಗಿ ಅಭಿವೃದ್ಧಿಗೆ ಸದ್ಬಳಕೆ ಮಾಡಿಕೊಳ್ಳುತ್ತಿಲ್ಲ. ನಗರದ ಪ್ರದೇಶಗಳಲ್ಲಿ ಹೆಚ್ಚು ಕೈಗಾರಿಕಾ ಪ್ರದೇಶಗಳು ಇರುವುದರಿಂದ ಅಲ್ಲಿ ಉದ್ಯೋಗಾವಕಾಶಗಳು ಹೆಚ್ಚಾಗಿರುತ್ತವೆ. ಮುಖ್ಯವಾಗಿ ಭಾರತ ಕೃಷಿ ಪ್ರಧಾನವಾದ ಹಳ್ಳಿಗಳನ್ನೊಳಗೊಂಡ ದೇಶ. ಹಾಗಾಗಿ ಗ್ರಾಮೀಣ ಪ್ರದೇಶದಲ್ಲಿ ಹೆಚ್ಚು ಹಣ ಬರುವುದಿಲ್ಲ ಎಂದು ನಾವು ತಿಳಿದುಕೊಂಡಿದ್ದೇವೆ. ಇದು ಬದಲಾಗಬೇಕು, ಗ್ರಾಮಗಳಲ್ಲಿಯೂ ತಂತ್ರಜ್ಞಾನವನ್ನು ಸದ್ಬಳಕೆ ಮಾಡಿಕೊಂಡರೆ, ಕೃಷಿಯನ್ನು ಲಾಭದಾಯಕವನ್ನಾಗಿಸಬಹುದು. ವಿಜ್ಞಾನವನ್ನು ಕೃಷಿಯಲ್ಲಿ ಲಾಭ ಪಡೆಯಲು ಬಳಕೆ ಮಾಡಬೇಕಿದೆ, ರೈತರು ಹೆಚ್ಚಿನ ಲಾಭ ಪಡೆಯಬೇಕಿದೆ. ಹಳ್ಳಿಗಳಲ್ಲೇ ಕೃಷಿ ಉತ್ಪನ್ನಗಳನ್ನು ಬಳಸಿಕೊಂಡು ಹೆಚ್ಚಿನ ಲಾಭ, ಹಣ ಪಡೆಯುವ ಬಗ್ಗೆ ರೈತರಿಗೆ ಅರಿವು ಮೂಡಿಸುವ ಕಾರ್ಯವನ್ನು ಭಾರತೀಯ ವಿಜ್ಞಾನ ಸಂಸ್ಥೆ ಮಾಡುತ್ತಿದೆ, ಕೃಷಿಯಲ್ಲಿಯೂ ಹೆಚ್ಚಿನ ಉದ್ಯೋಗ ಸೃಜಿಸಬಹುದು ಎಂಬುದರ ಅರಿವು ಮೂಡಿಸುತ್ತಿದೆ ಎಂದರು.

ಧಾರವಾಡ ಕೃಷಿ ವಿ.ವಿ. ಪ್ರಾಧ್ಯಾಪಕಿ ಡಾ. ಸಣ್ಣ ಪಾಪಮ್ಮ ಅವರು ಮಾತನಾಡಿ, ಹವಾಮಾನ ವೈಪರಿತ್ಯಗಳು, ನಿಸರ್ಗದ ಮೇಲಿನ ಮಾನವ ನಿರ್ಮಿತ ದುಷ್ಕೃತ್ಯಗಳಿಂದಾಗುತ್ತಿವೆ. ಹೀಗಾಗಿ ಮಳೆ ಹಾಗೂ ಋತುಮಾನಗಳ ಅನಿಶ್ಚಿತತೆಯಿಂದ ರೈತರು ಸಂಕಷ್ಟಕ್ಕೆ ಸಿಲುಕುತ್ತಿದ್ದಾರೆ. ಹೀಗಾಗಿ ನೈಸರ್ಗಿಕ ಕೃಷಿಗೆ ಈಗ ರೈತರು ಆದ್ಯತೆ ನೀಡಲಾರಂಭಿಸಿದ್ದಾರೆ. ರೈತರಿಗೆ ಕೃಷಿ ಜೊತೆಗೆ ಕೃಷಿಯೇತರ ಚಟುವಟಿಕೆಗಳು ಆದಾಯದ ಮೂಲಗಳಾಗಲಿವೆ. ಬಾಳೆ, ತೆಂಗು, ಅಡಿಕೆ ಅಲ್ಲದೆ ಕುರಿ ಸಾಕಾಣಿಕೆಯಲ್ಲಿ ಕೇವಲ ಅದರ ಮೂಲ ಆದಾಯಕ್ಕೆ ಮಾತ್ರ ಆದ್ಯತೆ ನೀಡದೆ, ಅದರ ಉಪ ಉತ್ಪನ್ನಗಳನ್ನು ತಯಾರಿಸಿ, ಮೌಲ್ಯವರ್ಧನೆ ಮಾಡುವ ಮೂಲಕವೂ ಆದಾಯ ಕಂಡುಕೊಳ್ಳಬಹುದು. ಈ ನಿಟ್ಟಿನಲ್ಲಿ ರೈತರು ಒಂದು ಹೆಜ್ಜೆ ಮುಂದೆ ಬಂದಲ್ಲಿ, ಸಂಶೋಧನಾ ಸಂಸ್ಥೆಗಳು ಹತ್ತು ಹೆಜ್ಜೆ ನಿಮ್ಮ ಜೊತೆಗೂಡಿ ಸಹಾಯ ಮಾಡುತ್ತವೆ ಎಂದರು.

ಜಿಲ್ಲಾ ಕೈಗಾರಿಕಾ ಕೇಂದ್ರದ ಉಪನಿರ್ದೇಶಕ ಮಂಜುನಾಥ್ ಮಾತನಾಡಿ, ಹೊಸದಾಗಿ ಕೈಗಾರಿಕೆ ಪ್ರಾರಂಭಿಸುವವರಿಗೆ ಪ್ರಧಾನಮಂತ್ರಿ ಉದ್ಯೋಗ ಸೃಜನೆ ಯೋಜನೆ ಹಾಗೂ ನೂತನ ಕೈಗಾರಿಕೆ ನೀತಿ–2020–25 ಎಂಬ ರಾಜ್ಯ ಸರ್ಕಾರದ ನೀತಿ ಇದೆ. ಈ ಎರಡು ಯೋಜನೆಗಳಲ್ಲಿ ಉದ್ಯಮ ಸ್ಥಾಪಿಪಿಸಲು ಸಾಲಸೌಲಭ್ಯ ಮತ್ತು ಸಹಾಯಧನ ನೀಡಲಾಗುವುದು. ಕೈಗಾರಿಕೆ ಸ್ಥಾಪನೆಗೆ ಮುಖ್ಯವಾಗಿ ಜಾಗ ಬೇಕು. ಇಲಾಖೆಯ ಯೋಜನೆಗಳ ಸೌಲಭ್ಯಗಳ ಈ ಕುರಿತು ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ ಸಂಪರ್ಕಿಸಬಹುದು ಎಂದರು.

ಚಳ್ಳಕೆರೆ ತಾಲ್ಲೂಕಿನ ಕುದಾಪುರದಲ್ಲಿ 55 ಎಕರೆ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಾಡಲಾಗಿದೆ. ಈಗಾಗಲೇ ಸುಮಾರು 28 ನಿವೇಶಗಳನ್ನು ಹಂಚಿಕೆ ಮಾಡಲಾಗಿದೆ. ಮುಂಬರುವ ದಿನಗಳಲ್ಲಿ ಇನ್ನೂ ಎರಡು–ಮೂರು ವರ್ಷಗಳಲ್ಲಿ ಕುದಾಪುರದಲ್ಲಿ "ಇಂಡಸ್ಟ್ರೀಯಲ್ ಹಬ್" ಸೃಷ್ಟಿಯಾಗಲಿದೆ. ವಿವಿಧ ರೀತಿಯ ಕೈಗಾರಿಕೆಗಳು ಪ್ರಾರಂಭವಾಗಲಿವೆ ಎಂದರು.

ಚಿತ್ರದುರ್ಗ ಜಿಲ್ಲೆಯಲ್ಲಿ 1985ರಲ್ಲಿ ಕೆಳಗೋಟೆ ಕೈಗಾರಿಕಾ ಪ್ರದೇಶ ಪ್ರಾರಂಭವಾಯಿತು. ಆದಾದ ನಂತರ ಇಲ್ಲಿಯವರೆಗೂ ಯಾವುದೇ ಕೈಗಾರಿಕಾ ಪ್ರದೇಶ ಅಭಿವೃದ್ಧಿ ಮಾಡಿರಲಿಲ್ಲ.

## ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸಿ ಹೊಸತನ ಕಂಡುಕೊಳ್ಳಿ: ಕೆ.ರವಿಶಂಕರ್ ರೆಡ್ಡಿ



» ಚಿತ್ರದುರ್ಗ

ಶಿಕ್ಷಕರು ಪಠ್ಯೇತರ ಚಟುವಟಿಕೆಯಲ್ಲಿ ಭಾಗವಹಿಸಿ ಹೊಸತನವನ್ನು ತಿಳಿದುಕೊಳ್ಳಬೇಕು. ಈ ವಿಚಾರಗಳನ್ನು ವಿದ್ಯಾರ್ಥಿಗಳಿಗೆ ತಿಳಿಸಿ, ಅವರು ಸಹ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವಂತೆ ಪ್ರೇರೆಪಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಕೆ.ರವಿಶಂಕರ್ ರೆಡ್ಡಿ ಹೇಳಿದರು.ನಗರದ ಬಾಲಕರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕರ್ನಾಟಕ ಶಿಕ್ಷಕರ ಕಲ್ಯಾಣ ನಿಧಿ ಹಾಗೂ ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರ ಕಾರ್ಯಾಲಯ ವತಿಯಿಂದ ಆಯೋಜಿಸಿದ್ದ 2023–24ನೇ ಸಾಲಿನ ಜಿಲ್ಲಾ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರ ಸಹ–ಪಠ್ಯ ಚಟುವಟಿಕೆಗಳ ಸ್ಪರ್ಧಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶಿಕ್ಷಕರು ತಾಲ್ಲೂಕು ಹಾಗೂ ಜಿಲ್ಲಾ ಮಟ್ಟದ ಪಠ್ಯೇತರ ಚಟುವಟಿಕೆಗಳಲ್ಲಿ ಭಾಗವಹಿಸಿ ವಿಜೇತರಾಗಿ ರಾಜ್ಯ, ರಾಷ್ಟ್ರ ಮಟ್ಟದಲ್ಲಿ ಭಾಗವಹಿಸಬೇಕು. ಇದು ಸ್ಪರ್ಧಾ ಯುಗ ಆಗಿರುವುದ್ದರಿಂದ ಸದಾ ಕಾಲ ಶಿಕ್ಷಕರು ಹೊಸತನ ಹಾಗೂ ಹೊಸ ವಿಚಾರಗಳನ್ನು ಕಲಿತು, ರೂಢಿಸಿಕೊಳ್ಳಲು ಆದ್ಯತೆ ನೀಡಬೇಕು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಗುಣಾತ್ಮಕ ಶಿಕ್ಷಣದ ಜೊತೆಗೆ ಮಕ್ಕಳಿಗೆ ಬದುಕಿನ ಕೌಶಲ್ಯಗಳನ್ನು ಕಲಿಸಬೇಕು. ಸ್ಪರ್ಧೆಗಳಲ್ಲಿ ಭಾಗವಹಿಸುವಂತೆ ಪ್ರೇರಣೆ ನೀಡಬೇಕು. ಶಿಕ್ಷಕರು ಧನಾತ್ಮಕ ಚಿಂತನೆ ಬೆಳಸಿಕೊಳ್ಳಬೇಕು ಎಂದು ಹೇಳಿದರು.

ಕ್ಷೇತ್ರಶಿಕ್ಷಣಾಧಿಕಾರಿ ಎಸ್.ನಾಗಭೂಷಣ್ ಮಾತನಾಡಿ, ಶಿಕ್ಷಕರು 365 ದಿನಗಳ ಕಾಲ ಬೋಧನೆ, ಪಠ್ಯ ಪರೀಕ್ಷೆ, ಮೌಲ್ಯಮಾಪನ ಪ್ರಕ್ರಿಯೆಯಲ್ಲಿ ತೊಡಗಿರುತ್ತಾರೆ. ವೃತ್ತಿಯ ಹೊರತಾಗಿ ಶಿಕ್ಷಕರಲ್ಲಿ ಇರುವ ಪ್ರತಿಭೆಗಳನ್ನು ಹೊರ ಹಾಕಲು ಸಹ–ಪಠ್ಯೇತರ ಸ್ಪರ್ಧಾ ಚಟುವಟಿಕೆಗಳನ್ನು ಆಯೋಜಿಸಲಾಗಿದೆ ಎಂದು ಹೇಳಿದರು.

ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರುಗಳಿಗೆ ಜನಪದಗೀತೆ, ಆಶು ಭಾಷಣ, ಪ್ರಬಂಧ, ಸ್ಥಳದಲ್ಲೇ ಪಾಠೋಪಕರಣ(ಟಿಎಲ್‌ಎಂ) ತಯಾರಿಕೆ, ಸ್ಥಳದಲ್ಲೇ ಚಿತ್ರ ಬರೆಯುವ, ರಸಪ್ರಶ್ನೆ (ಸಮಾನ್ಯ ಜ್ಞಾನ), ರಸಪ್ರಶ್ನೆ(ವಿಜ್ಞಾನ) ಸ್ಪರ್ಧೆ ಚಟುವಟಿಗಳು ನಡೆದವು.

ಈ ಸಂಧರ್ಭದಲ್ಲಿ ಸಮಗ್ರ ಶಿಕ್ಷಣ ಅಧಿಕಾರಿ ಸಿ.ಎಸ್.ವೆಂಕಟೇಶ್, ಎಸ್‌ಎಸ್‌ಎಲ್‌ಸಿ ನೋಡಲ್ ಅಧಿಕಾರಿ ಎನ್.ಆರ್.ತಿಪ್ಪೇಸ್ವಾಮಿ, ಸಹ ಶಿಕ್ಷಕರ ಸಂಘದ ಜಿಲ್ಲಾಧ್ಯಕ್ಷ ಶಿವಣ್ಣ, ವಿಜ್ಞಾನ ವಿಷಯದ ಪರಿವೀಕ್ಷಕ ಗೋವಿಂದಪ್ಪ, ಆಂಗ್ಲ ಹಾಗೂ ಸಮಾಜ ವಿಜ್ಞಾನ ವಿಷಯದ ಪರಿವೀಕ್ಷಕ ಚಂದ್ರಣ್ಣ, ಕನ್ನಡ ವಿಷಯದ ಪರಿವೀಕ್ಷಕ ಶಿವಣ್ಣ ಸೇರಿದಂತೆ ಪ್ರಾಥಮಿಕ ಹಾಗೂ ಪ್ರೌಢಶಾಲಾ ಶಿಕ್ಷಕರು, ಕಾಲೇಜಿನ ಸಿಬ್ಬಂದಿಗಳು ಇದ್ದರು.

## ಪ್ರಮುಖ ಸುದ್ದಿ

# ದಾವಣಗೆರ ಲಿಂಗತ್ವ ದೌರ್ಜನ್ಯ ಅಭಿಯಾನ ಜಾಗೃತಿ ಜಾಥಾ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಎನ್. ಆರ್.ಎಲ್. ಎಂ ಯೋಜನೆಯಡಿ ರಚಿಸಲ್ಪಟ್ಟ ಸ್ವಸಹಾಯ ಸಂಘಗಳ ಸಹಯೋಗದೊಂದಿಗೆ ನಗರದ ಜಯದೇವ ವೃತ್ತದಲ್ಲಿ ಆಯೋಜಿಸಲಾದ ಲಿಂಗತ್ವ ದೌರ್ಜನ್ಯ ಅಭಿಯಾನದ ಕುರಿತ ಜಾಗೃತಿ ಜಾಥಾಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಸುರೇಶ್ ಬಿ ಇಟ್ನಾಳ್ ಹಸಿರು ನಿಶಾನೆ ತೋರಿಸುವ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ನಮ್ಮ ದೇಶ ಪುರುಷ ಪ್ರಧಾನ ಸಮಾಜವಾಗಿದ್ದು,




ತಾಯಂದಿರಿಗೆ ಗಂಡು ಮಕ್ಕಳೆಂದರೆ ಎಲ್ಲಿಲ್ಲದ ಆಸಕ್ತಿಯಿಂದಾಗಿ ಇಂದಿಗೂ ಸಹ ಹೆಣ್ಣು ಭ್ರೂಣ ಹತ್ಯೆ ನಡೆಯುತ್ತಲೇ ಇವೆ. ಒಂದು ಹೆಣ್ಣು ನಮ್ಮ ಸಮಾಜದಲ್ಲಿ ಹುಟ್ಟಿನಿಂದ ಸಾಯುವವರೆಗೂ ಗಂಡು ಮಕ್ಕಳಿಗೆ ಒಂದು ವಿಶೇಷ ಪ್ರಾತಿನಿಧ್ಯ ನೀಡುವುದನ್ನು ನಾವು ಕಾಣಬಹುದು. ಮಹಿಳೆಯರು ಮೊದಲು ಹೆಣ್ಣು ಮಕ್ಕಳಿಗೆ ಪ್ರಾಶಸ್ತ್ಯ ನೀಡಿದಾಗ ಮಾತ್ರ ಸಮಾಜ ಬದಲಾವಣೆಯಾಗಲು ಸಾಧ್ಯ ಎಂದರು.

ಎಲ್ಲರಿಗೂ ಸಮಾನವಾದ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ಹೆಚ್ಚಿನ ಜಾಗೃತಿ ಮೂಡಿಸಬೇಕಾಗಿದೆ. ಶಿಕ್ಷಣ, ರಾಜಕೀಯ, ಉದ್ಯೋಗ ಹಾಗೂ ಇನ್ನಿತರ ಕ್ಷೇತ್ರಗಳಲ್ಲಿ ಮಹಿಳೆಯರಿಗೆ ಸಮಾನ ಅವಕಾಶ ಕಲ್ಪಿಸಬೇಕು. ಹೆಣ್ಣು ಮಕ್ಕಳಿಗೆ ಅನ್ವಯಿಸುವಂತೆ ಹಲವಾರು ಕಾಯ್ದೆ, ಕಾನೂನುಗಳು ಜಾರಿಯಲ್ಲಿವೆ. ಪ್ರತಿಜ್ಞಾವಿಧಿಯನ್ನು ಕೇವಲ ಒಂದು ದಿನಕ್ಕೆ ಮಾತ್ರ ಸೀಮಿತಗೊಳಿಸದೆ ಅದನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಲಿಂಗತ್ವ ದೌರ್ಜನ್ಯ ತಡೆಗೆ ಜಾಗೃತಿ ಜಾಥಾ: ಲಿಂಗ ತಾರತಮ್ಯ ತೊರಿಯಲಿ ಸಮಾನತೆ ಬೆಳೆಯಲಿ, ನಮ್ಮ ನಡೆ ಸಮಾನತೆಯ ಕಡೆ, ಶಿಕ್ಷಣ ಎಲ್ಲರ ಹಕ್ಕು, ಹೆಣ್ಣು ಭ್ರೂಣಹತ್ಯೆ ಮಾಡದಿರಿ ಎಂಬ ಘೋಷ ವಾಕ್ಯಗಳೊಂದಿಗೆ ಜಾಥಾವು ಕೆ.ಇ.ಬಿ ಸರ್ಕಲ್, ವಿದ್ಯಾರ್ಥಿ ಭವನ, ಸಿ.ಜಿ ಹಾಸ್ಪಿಟಲ್ ರಸ್ತೆ ಮೂಲಕ ಸಾಗಿತು. .

## ಫಾಸ್ಟ್ ನ್ಯೂಸ್

### ಗೋಮಾಂಸ ಮಾರಾಟ ಪ್ರಕರಣ: ಇಬ್ಬರ ವಿರುದ್ಧ ಪ್ರಕರಣ ದಾಖಲು

» ಚಳ್ಳಕೆರೆ

ತಾಲ್ಲೂಕಿನ ನಾಯಕನಹಟ್ಟಿ ಟೌನ್ ವ್ಯಾಪ್ತಿಯ 6ನೇ ವಾರ್ಡ್‌ನಲ್ಲಿ ಕಾನೂನು ಬಾಹಿರವಾಗಿ ಗೋಮಾಂಸವನ್ನು ಕಡಿದು ಮಾರಾಟ ಮಾಡುತ್ತಿದ್ದ ಪ್ರಕರಣಕ್ಕೆ ಸಂಬಂಧಪಟ್ಟಂತೆ ನಾಯಕನಹಟ್ಟಿ ಪೊಲೀಸರು ಇಬ್ಬರ ಮೇಲೆ ಪ್ರಕರಣ ದಾಖಲಿಸಿದ್ದಾರೆ. ಖಚಿತ ವರ್ತಮಾನದ ಮೇರೆಗೆ ಠಾಣಾ ಪಿಎಸ್‌ಐ–2 ಕೆ.ಶಿವಕುಮಾರ್ ವಾರ್ಡ್ ನಂ.6ರ ಷಾನಾಜ್ ಎಂಬುವವರಿಗೆ ಸೇರಿದ ಶೆಡ್‌ನಲ್ಲಿ ಪರಿಶೀಲನೆ ನಡೆಸಿದಾಗ ಅಲ್ಲಿ ಯಾವುದೋ ದನವನ್ನು ಕಡಿದು ಮಾಂಸವನ್ನು ಮಾರಾಟ ಮಾಡುತ್ತಿದ್ದು ಕಂಡುಬಂತು. ಕೂಡಲೇ ಪ್ರಕರಣಕ್ಕೆ ಸಂಬಂಧಪಟ್ಟಂತೆ ಇಬ್ಬರು ಆರೋಪಿಗಳಾದ ಎಂ.ಹಸೇನ್(43), ಷಾನಾಜ್(65) ಇವರ ವಿರುದ್ಧ ಪ್ರಕರಣ ದಾಖಲಿಸಿ ತನಿಖೆ ಮುಂದುವರೆದಿದೆ.

### ಎಸ್‌ಎಂಎಸ್ ಮೂಲಕ ಮೇಲ್ಮನವಿಗೆ ಅವಕಾಶ: ಸಕಾಲ ಮಿಷನ್

» ದಾವಣಗೆರೆ

ಸಕಾಲ ಅಧಿಸೂಚಿತ ಸೇವೆಗಳ ಅಡಿಯಲ್ಲಿ ಸಲ್ಲಿಸುವ ಅರ್ಜಿಗಳು ತಿರಸ್ಕೃತಗೊಂಡಿದ್ದರೆ ಅಂತಹವರ ನೊಂದಾಯಿತ ಮೊಬೈಲ್ ಸಂಖ್ಯೆಗೆ ಪ್ರಥಮ ಮೇಲ್ಮನವಿ ಸಲ್ಲಿಸಲು ಅನುಕೂಲವಾಗುವಂತೆ ಲಿಂಕ್ ಗಳನ್ನು ಕಳುಹಿಸುವ ವ್ಯವಸ್ಥೆಯನ್ನು ಸಕಾಲ ಮಿಷನ್ ರಾಜ್ಯದಲ್ಲಿ ಜಾರಿಗೆ ತಂದಿದೆ. ಅರ್ಜಿ ತಿರಸ್ಕೃತಗೊಂಡಿದ್ದಲ್ಲಿ ಅರ್ಜಿದಾರರು ಸಕ್ಷಮ ಪ್ರಾಧಿಕಾರಿಗೆ ಪ್ರಥಮ ಮೇಲ್ಮನವಿಯನ್ನು ಸಲ್ಲಿಸಲು ಸಕಾಲ ಮಿಷನ್ ಅವಕಾಶ ಕಲ್ಪಿಸಿದೆ. ನಾಗರೀಕರು ಈ ಅವಕಾಶವನ್ನು ಪರಿಣಾಮಕಾರಿಯಾಗಿ ಹಾಗೂ ಸುಲಭವಾಗಿ ಬಳಸಿಕೊಳ್ಳಲು ಅನುವು ಮಾಡಿಕೊಡುವ ಉದ್ದೇಶದಿಂದ ಅಪೀಲು ಹಾಕಲು ಲಿಂಕ್‌ನ್ನು ಎಸ್‌ಎಂಎಸ್ ಮೂಲಕ ಕಳುಹಿಸುವ ವ್ಯವಸ್ಥೆ ಮಾಡಲಾಗಿದೆ ಎಂದು ಸಕಾಲ ಮಿಷನ್ನ ಹೆಚ್ಚುವರಿ ಯೋಜನಾ ನಿರ್ದೇಶಕಿ ಶ್ರೀಮತಿ ಪಲ್ಲವಿ ಆಕುರಾತಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.ತಿರಸ್ಕೃತಗೊಂಡ ಅರ್ಜಿಗಳಿಗೆ ಸಂಬಂಧಿಸಿದಂತೆ ಸ್ವಯಂಚಾಲಿತವಾಗಿ ಎಸ್‌ಎಂಎಸ್ ಕಳುಹಿಸುವ ಸೇವೆಯನ್ನು ಸೆಪ್ಟೆಂಬರ್ ತಿಂಗಳಿನಿಂದ ಚಾಲನೆಗೊಳಿಸಿದೆ. ವಿದ್ಯುನ್ಮಾನ ನಾಗರೀಕ ಸೇವಾ ವಿತರಣಾ ನಿರ್ದೇಶನಾಲಯದಿಂದ ಇದುವರೆಗೆ ಒಟ್ಟು 3,18,420 ಎಸ್‌ಎಂಎಸ್‌ಗಳನ್ನು ಕಳುಹಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಸಾರಿಗೆ ಇಲಾಖೆಯಲ್ಲಿ ಅರ್ಜಿಗಳ ಮಾಹಿತಿಯನ್ನು ಸಕಾಲ ತಂತ್ರಾಂಶಕ್ಕೆಮ್ಯಾನ್ಯುಯಲ್ ಆಗಿಪುಶ್ ಮಾಡುತ್ತಿದ್ದು, ಇದನ್ನು ಅಟೋಪುಷ್‌ಗೆ ಬದಲಾಯಿಸಲಾಗಿದೆ. ಇದರಿಂದ, ಸಕಾಲದಲ್ಲಿ ಬಾಕಿ ಇದ್ದ ಅರ್ಜಿಗಳ ಸಂಖ್ಯೆಯು ಗಣನೀಯವಾಗಿ ಇಳಿಕೆಗೊಂಡು 9691 ರಿಂದ 2682 ಗಳಿಗೆ ಇಳಿಕೆಯಾಗಿದೆ ಎಂದು ಪಲ್ಲವಿ ಅವರು ತಿಳಿಸಿದ್ದಾರೆ.ದಿನದಿಂದ ದಿನಕ್ಕೆ ಜನಪ್ರಿಯವಾಗುತ್ತಿರುವ ಸಕಾಲ ಯೋಜನೆಯಡಿ ಅರ್ಜಿ ಸಲ್ಲಿಸುತ್ತಿರುವವರ ಸಂಖ್ಯೆಯನ್ನು ಗಮನಿಸಿ ಸಕಾಲ ಮಿಷನ್ ಹೊಸ ಹೊಸ ಸೇವೆಗಳನ್ನು ಸೇರ್ಪಡೆಗೊಳಿಸುತ್ತಿದೆ. ಕಳೆದ ಮೂರು ತಿಂಗಳ ಅವಧಿಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ಅಸ್ತಿತ್ವದಲ್ಲಿರುವ ದೂರ ಸಂಪರ್ಕ ಮೂಲಸೌಕರ್ಯ ಗೋಪುರಕ್ಕೆ ಅನುಮತಿ/ ನಿಯಮಿತಗೊಳಿಸುವಿಕೆ ಮತ್ತು ಹೊಸ/ ಅಸ್ತಿತ್ವದಲ್ಲಿರುವ ಓವರ್‌ಗ್ರೌಂಡ್ ಕೇಬಲ್ ಮೂಲಸೌಕರ್ಯ/ಭೂಗತ ಕೇಬಲ್ ಮೂಲಸೌಕರ್ಯಕ್ಕಾಗಿ ಅನುಮತಿ/ನಿಯಮಿತಗೊಳಿಸುವಿಕೆಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.ಅಲ್ಪ ಸಂಖ್ಯಾತರ ಇಲಾಖೆಯಿಂದ ರಾಷ್ಟ್ರೀಯ ವಿದೇಶಿ ವಿದ್ಯಾರ್ಥಿವೇತನ ಯೋಜನೆ, ಎಂಫಿಲ್ ಮತ್ತು ಪಿಹೆಚ್‌ಡಿ ಫೆಲೋಶಿಪ್ ಯೋಜನೆ ಹಾಗೂ ಐಐಟಿ, ಐಐಎಂ, ಐಐಎಸ್‌ಸಿ ಸಂಸ್ಥೆಗಳಲ್ಲಿ ಪ್ರವೇಶ ಪಡೆದಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಉತ್ತೇಜನ ನೀಡುವ ಯೋಜನೆಗಳನ್ನು ಸಹ ಸಕಾಲದ ಅಡಿಯಲ್ಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಮಾಡಿದೆ ಎಂದು ಆಕುರಾತಿ ಅವರು ತಿಳಿಸಿದ್ದಾರೆ. ಮಾಹಿತಿ ತಂತ್ರಜ್ಞಾನ ಇಲಾಖೆಯಿಂದ ಸ್ಟಾರ್ಟ್ ಅಪ್ ನೋಂದಣಿ ಮತ್ತು ಗೃಹ ಇಲಾಖೆಯಿಂದ ಬಾಡಿಗೆದಾರರ ಪೂರ್ವಾಪರ ಪರಿಶೀಲನೆ ಸೇರಿದಂತೆ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯಿಂದ ಉದ್ಯೋಗಾಕಾಂಕ್ಷಿಯ ನೋಂದಣಿ ದಾಖಲೆಯ ವರ್ಗಾವಣೆ, ಉದ್ಯೋಗಾಕಾಂಕ್ಷಿಗಳ ನೋಂದಣಿ, ಉದ್ಯೋಗಾಕಾಂಕ್ಷಿಗಳ ಮರುನೋಂದಣಿ ಮತ್ತು ಉದ್ಯೋಗಾಕಾಂಕ್ಷಿಗಳ ನೋಂದಣಿ ಪತ್ರದ ನವೀಕರಣ ಯೋಜನೆ ಸಕಾಲ ವ್ಯಾಪ್ತಿಗೆ ತರಲಾಗಿದೆ.

### ವ್ಯಕ್ತಿ ಕಾಣೆ

» ಚಿತ್ರದುರ್ಗ

ಚಿತ್ರದುರ್ಗ ತಾಲ್ಲೂಕಿನ ಕಳ್ಳಿಹಟ್ಟಿ ಗ್ರಾಮದ ನಿವಾಸಿ ಸಿ. ಮಂಜಪ್ಪ ಎಂಬ ವ್ಯಕ್ತಿ ಕಾಣೆಯಾಗಿರುವ ಪ್ರಕರಣ ಚಿತ್ರದುರ್ಗ ಗ್ರಾಮಂತರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದೆ.ಕಾಣೆಯಾದ ವ್ಯಕ್ತಿಯ ಚಹರೆ ಇಂತಿದೆ. ಸಿ. ಮಂಜಪ್ಪ (55 ವರ್ಷ) ತಂದೆ ಚೌಡಪ್ಪ, 5.6 ಅಡಿ ಎತ್ತರ, ಕೆಂಪು ಮೈ ಬಣ್ಣ, ತಲೆಯಲ್ಲಿ 2 ಇಂಚು ಉದ್ದದ ಕಪ್ಪು ಕೂದಲು ಇರುತ್ತದೆ. ಕನ್ನಡ ಮತ್ತು ತೆಲುಗು ಭಾಷೆ ಮಾತನಾಡುತ್ತಾರೆ. ಕಾಣೆಯಾದ ಸಮಯದಲ್ಲಿ ನೀಲಿ ಬಣ್ಣದ ಪ್ಯಾಂಟ್ ಧರಿಸಿರುತ್ತಾರೆ.ಈ ಮೇಲ್ಕಂಡ ಚಹರೆಯುಳ್ಳ ವ್ಯಕ್ತಿಯ ಕುರಿತು ಮಾಹಿತಿ ತಿಳಿದು ಬಂದಲ್ಲಿ ಚಿತ್ರದುರ್ಗ ಗ್ರಾಮಂತರ ಪೊಲೀಸ್ ಠಾಣೆಯನ್ನು ಸಂಪರ್ಕಿಸಬಹುದು.

# ಚಳ್ಳಕೆರೆ ಕ್ಷೇತ್ರದ 20 ಕಡೆ ಜನಸಂಪರ್ಕ ಸಭೆ

## ಜನರ ಸಮಸ್ಯೆಗಳಿಗೆ ಸ್ಪಂದಿಸದೇ ನಿರ್ಲಕ್ಷ್ಯ ವಹಿಸಿದರೆ ಜನರ ಆಕ್ರೋಶಕ್ಕೆ ತುತ್ತಾಗುವಿರಿ: ಶಾಸಕ ಟಿ.ರಘುಮೂರ್ತಿ

» ಚಳ್ಳಕೆರೆ

ಚಳ್ಳಕೆರೆ ವಿಧಾನಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಕಳೆದ ಸುಮಾರು ಮೂರು ತಿಂಗಳಿನಿಂದ ಸಾರ್ವಜನಿಕರಿಗೆ ಸಮರ್ಪಕವಾಗಿ ಸರ್ಕಾರಿ ಸೌಲಭ್ಯ ತಲುಪಿಸುವ ಹಾಗೂ ಜನರ ಸಮಸ್ಯೆಗೆ ಸಕರಾತ್ಮಕವಾಗಿ ಸ್ಪಂದಿಸಲು ಒಟ್ಟು ಚಳ್ಳಕೆರೆ ವಿಧಾನಸಭಾ ಕ್ಷೇತ್ರದಲ್ಲಿ 15, ತುರುವನೂರು ಹೋಬಳಿ ವ್ಯಾಪ್ತಿಯಲ್ಲಿ 15 ಒಟ್ಟು 20 ಸಭೆ ನಡೆಸಿ ಜನರ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಲು ಅಧಿಕಾರಿ ವರ್ಗಕ್ಕೆ ಸೂಚನೆ ನೀಡಿದ್ದರೂ ನಿರೀಕ್ಷಿತ ಮಟ್ಟದಲ್ಲಿ ಅಧಿಕಾರಿಗಳ ಸ್ಪಂದನೆಯಾಗುತ್ತಿಲ್ಲವೆಂದು ಶಾಸಕ ಟಿ.ರಘುಮೂರ್ತಿ ತಮ್ಮ ಅಸಮದಾನವನ್ನು ಹೊರಹಾಕಿದರು.



ಅವರು, ಶನಿವಾರ ತಾಲ್ಲೂಕು ಪಂಚಾಯಿತಿ ಕಚೇರಿ ಆವರಣದಲ್ಲಿ ಜನಸಂಪರ್ಕ ಸಭೆಯಲ್ಲಿ ಸಾರ್ವಜನಿಕರಿಂದ ಬಂದ ಅರ್ಜಿಗಳ ವಿಲೇವಾರಿ ಕುರಿತಂತೆ ಕರೆಯಲಾಗಿದ್ದ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದರು. ಈ ಕ್ಷೇತ್ರದ ಶಾಸಕನಾಗಿ ಮತ್ತೊಮ್ಮೆ ಜನ ನನಗೆ ಮೂರನೇ ಬಾರಿಗೆ ಅಧಿಕಾರ ಕೊಟ್ಟಿದ್ದಾರೆ. ಮತದಾರರ ಋಣವನ್ನು ನಾನು ತೀರಿಸಲೇಬೇಕು. ಆದರೆ, ಅಧಿಕಾರಿ ವರ್ಗ ಮಾತ್ರ ಸಮಸ್ಯೆಗಳ ಪರಿಹಾರಕ್ಕೆ ಗಂಬೀರವಾಗಿ ಚಿಂತನೆ ನಡೆಸುತ್ತಿಲ್ಲ, ಸಮಸ್ಯೆಗಳ ಆಳವನ್ನು ಅರ್ಥಮಾಡಿಕೊಳ್ಳುವಲ್ಲಿ ವಿಫಲವಾಗಿದ್ದಾರೆ, ಕೆಲವರು ಮೇಲಾಧಿಕಾರಿಗಳಿಗೆ ಪತ್ರ ಬರೆದು ಸುಮ್ಮನೆ ಕೂತಿದ್ದಾರೆ ಹೀಗಾದರೆ ಜನ ನಮ್ಮ ಮೇಲೆ ವಿಶ್ವಾಸ ಕಳೆದುಕೊಳ್ಳುತ್ತಾರೆ. ಅಧಿಕಾರಿ ವರ್ಗದವರನ್ನೂ ಸಹ ನಂಬುವ ಸ್ಥಿತಿಯಲ್ಲಿ ಜನರಿಲ್ಲ, ಅದ್ದರಿಂದ ನೀವು ನಿಮ್ಮ ಕೆಲಸ ಕಾರ್ಯಗಳ ಮೂಲಕ ಜನರ ವಿಶ್ವಾಸವನ್ನು ಗಳಿಸಬೇಕು. ಜನರ ಸಮಸ್ಯೆಗಳಿಗೆ ಸ್ಪಂದಿಸಿದರೆ ಮಾತ್ರ ನಿಮಗೂ ಗೌರವ, ಸರ್ಕಾರಕ್ಕೂ ಗೌರವ. ಈ ನಿಟ್ಟಿನಲ್ಲಿ ಮತ್ತೊಮ್ಮೆ ಡಿ.15ರಂದು ಸಭೆ ನಡೆಸಿ ಅಂದು ಕೂಲಂಕುಷವಾಗಿ ಪ್ರತಿಯೊಂದು ಅರ್ಜಿಯ ವಿಲೇವಾರಿ ಹಾಗೂ ಸ್ಥಿತಿಗತಿಯ ಬಗ್ಗೆ ಚರ್ಚೆ ನಡೆಸುವೆ ಎಂದರು.

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮಳೆ, ಬೆಳೆ ವೈಫಲ್ಯದ ಹಿನ್ನಲೆಯಲ್ಲಿ ಗೋಶಾಲೆ ತೆರೆಯುವಂತೆ ಈಗಾಗಲೇ ಸಂಬಂಧಪಟ್ಟ ಸಚಿವರಿಗೆ ಮನವಿ ಮಾಡಿದ ಹಿನ್ನೆಲೆಯಲ್ಲಿ ಗೋಶಾಲೆ ಆರಂಭಕ್ಕೆ ಈಗ ಪಶುವೈದ್ಯ ಇಲಾಖೆಗೆ ಅನುಮತಿ ಲಭ್ಯವಾಗಿದೆ. ಗೋಶಾಲೆಗೆ ಮೇವು ಖರೀದಿಸಲು ಇಲಾಖೆಗೆ ಸರ್ಕಾರ 10 ಲಕ್ಷ ಹಣವನ್ನು ಬಿಡುಗಡೆಗೊಳಿಸಿದ್ದು, ಅಧಿಕಾರಿಗಳು ಕಾನೂನು ಪ್ರಕಾರ ಟೆಂಡರ್ ಕರೆದು ಜಾನುವಾರುಗಳಿಗೆ ಮೇವು ಸಬರಾಜು ಮಾಡುವಂತೆ ಸೂಚನೆ ನೀಡಿದರು.

ಚಳ್ಳಕೆರೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಗೃಹ ಲಕ್ಷ ಪಲಾನುಭವಿಗಳ ಸಂಖ್ಯೆ ಗಣನೀಯವಾಗಿ ಹೆಚ್ಚಿದೆ. ಶೇ. 95 ಸಾಧನೆಯತ್ತ ನಾವು ಹೆಜ್ಜೆ ಇಟ್ಟಿದ್ದೇವೆಂದರು. ಸಿಡಿಪಿಒ ಹರಿಪ್ರಸಾದ್ ಮಾಹಿತಿ ನೀಡಿ, ಪ್ರಸ್ತುತ ನವೆಂಬರ್ ಅಂತ್ಯಕ್ಕೆ 3316 ಹೊಸ ಅರ್ಜಿದಾರರಿಗೆ ಹಣ ಲಭಿಸಲಿದೆ, 1984 ಅರ್ಜಿಗಳು ಇನ್ನೂ ನೊಂದಾವಣೆಯಾಗಬೇಕಿದೆ ಎಂದರು. ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಮಾಹಿತಿ ನೀಡಿ, ಇತ್ತೀಚೆಗೆ ಹೊಸದಾಗಿ 84 ಹೊಸ ಶಿಕ್ಷಕರನ್ನು ನೇಮಿಸಿ ಆದೇಶ ನೀಡಿದೆ ಆ ಪೈಕಿ 74 ಶಿಕ್ಷಕರು ಕರ್ತವ್ಯಕ್ಕೆ ಹಾಜರಾಗಿದ್ದಾರೆ. 10 ಶಿಕ್ಷಕರ ಸಿಂಧುತ್ವ ಪರಿಶೀಲನೆಯಲ್ಲಿದೆ, 46 ಅತಿಥಿ ಶಿಕ್ಷಕರನ್ನು ಕೆಲಸಕ್ಕೆ ನೇಮಿಸಿಕೊಂಡಿದ್ದು, ಸಧ್ಯದ ಸ್ಥಿತಿಯಲ್ಲಿ ಶಿಕ್ಷಕರ ಸಮಸ್ಯೆ ನಿವಾರಣೆಯಾಗಿದೆ ಎಂದರು. ಆಹಾರ ಶಿರಸ್ಥೇದಾರ್ ವೀರಣ್ಣ ಮಾಹಿತಿ ನೀಡಿ, 46822 ಅರ್ಜಿಗಳು ನೊಂದಾವಣೆಯಾಗಿದ್ದು 44543 ಅರ್ಜಿಗಳನ್ನು ವಿಲೇ ಪಡಿಸಲಾಗಿದ್ದು 2279 ಅರ್ಜಿಗಳು ಪರಿಶೀಲನೆ ಹಂತದಲ್ಲಿವೆ. ಡಿ.20ರ ತನಕ ತಿದ್ದುಪಡಿ ಮತ್ತು ಕೈವೈಸಿಕೆ ಅನುಮತಿ ನೀಡಲಾಗಿದೆ ಎಂದರು.

ಪರಶುರಾಮಪುರ ವಿಭಾಗದಲ್ಲಿ ರೈತರಿಂದ ದಾರಿ ಸಮಸ್ಯೆಯ ಬಗ್ಗೆ 60 ಅರ್ಜಿಗಳು ಬಂದಿದ್ದು, ದಾರಿ ವಿಚಾರದಲ್ಲಿ ವೃತ್ತ ನಿರೀಕ್ಷಕ ಕೆ.ಸಮೀವುಲ್ಲಾರವರಿಗೆ ಸೂಚನೆ ನೀಡಿದ ಶಾಸಕರು ತಹಶೀಲ್ದಾರ್‌ರೊಡನೆ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆ ಪರಿಹರಿಸಿಕೊಡುವಂತೆ ಸೂಚಿಸಿದರು. ಠಾಣಾ ವೃತ್ತ ನಿರೀಕ್ಷಕ ಫಕೃದ್ದೀನ್ ದೇಸಾಯಿಯವರಿಗೆ ಕಸಬಾ ಹೋಬಳಿ ಮಟ್ಟದಲ್ಲಿ ರೈತರಿಗೆ ಜಮೀನಿಗೆ ಓಡಾಡಲು ದಾರಿ ಸಮಸ್ಯೆಗೆ ತಹಶೀಲ್ದಾರ್‌ರೊಡನೆ ತಾವು ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬೇಕು ಎಂದರು.

ಪ್ರಾರಂಭದಲ್ಲಿ ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ಎಸ್.ಶಶಿಧರ ಸ್ವಾಗತಿಸಿದರು, ತಹಶೀಲ್ದಾರ್ ರೇಹಾನ್ ಪಾಷ, ಎಇಇ ಎನ್.ಕಾವ್ಯ, ವಿಜಯಭಾಸ್ಕರ್, ದಯಾನಂದ, ಕೃಷಿ ಇಲಾಖೆ ಜೆ.ಅಶೋಕ್, ತೋಟಗಾರಿಕೆ ವಿರೂಪಾಕ್ಷಪ್ಪ, ಪಶುವೈದ್ಯ ಇಲಾಖೆ ರೇವಣ್ಣ, ಬೆಸ್ಕಾಂ ಇಲಾಖೆ ರಾಜು, ಬಿಸಿಎಂ ಅಧಿಕಾರಿ ದಿವಾಕರ್, ಸಮಾಜ ಕಲ್ಯಾಣಾಧಿಕಾರಿ ಮಂಜುನಾಥ, ಪರಿಶಿಷ್ಟ ವರ್ಗ ಕಲ್ಯಾಣಾಧಿಕಾರಿ ಶಿವರಾಜು, ಸಣ್ಣ ನೀರಾವರಿ ಇಲಾಖೆ ಅಣ್ಣಪ್ಪ, ರವಿಕುಮಾರ್ ಮುಂತಾದವರು ಸಭೆಯಲ್ಲಿ ಭಾಗವಹಿಸಿದ್ದರು.

# ತೆಲಂಗಾಣದಲ್ಲಿ ಕಾಂಗ್ರೆಸ್‌ಗೆ ಜಯ: ಸಂಭ್ರಮ

» ಚಿತ್ರದುರ್ಗ

ತೆಲಂಗಾಣದ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಜಯ ಭೇರಿ ಬಾರಿಸಿದ ಹಿನ್ನಲೆಯಲ್ಲಿ ಇಂದು ಚಿತ್ರದುರ್ಗ ಕಾಂಗ್ರೆಸ್ ಜಿಲ್ಲಾ ಕಚೇರಿ ಮುಂದೆ ಮಾಜಿ ಸಚಿವ ಅಂಜನೇಯ ರವರು ತಮಟೆಯನ್ನು ಬಾರಿಸಿ ತಮ್ಮ ಸಂತೋಷವನ್ನು ವ್ಯಕ್ತಪಡಿಸಿದರೆ, ಮಹಿಳಾ ಕಾರ್ಯಕರ್ತರು ನೃತ್ಯ ಮತ್ತು ಸಾರ್ವಜನಿಕರಿಗೆ ಸಿಹಿಯನ್ನು ಹಂಚುವುದರ ಮೂಲಕ ವಿಜಯೋತ್ಸವವನ್ನು ಆಚರಣೆ ಮಾಡಲಾಯಿತು.



ಈ ಸಂದರ್ಭದಲ್ಲಿ ಮಾತನಾಡಿದ ಮಾಜಿ ಸಚಿವ ಹೆಚ್.ಆಂಜನೇಯ ತೆಲಂಗಾಣದಲ್ಲಿ ಕಾಂಗ್ರೆಸ್ ಪಕ್ಷ ಜಯ ಭೇರಿ ಭಾರಿಸಿದೆ. ಬಿಜೆಪಿ ಪಕ್ಷಕ್ಕೆ ದಕ್ಷಿಣ ಭಾರತವನ್ನು ಹೆಬ್ಬಾಗಿಲು ಎನ್ನಲಾಗುತ್ತಿತು ಇದನ್ನು ಅಲ್ಲಿನ ಮತದಾರರು ಚುನಾವಣೆಯಲ್ಲಿ ಸುಳ್ಳು ಮಾಡುವುದರ ಮೂಲಕ ಕಾಂಗ್ರೆಸ್ ಪಕ್ಷಕ್ಕೆ ಮತವನ್ನು ನೀಡಿ ಆಧಿಕಾರವನ್ನು ನೀಡಿದ್ದಾರೆ. ಇದಕ್ಕೆ ಅಲ್ಲಿನ ಮತದಾರರಿಗೆ ನಮ್ಮ ಪಕ್ಷ ಅಭಿನಂದಿಸುತ್ತದೆ. ಭ್ರಷ್ಟಾಚಾರ, ದರಗಳ ಏರಿಕೆ, ಹಿನ್ನಲೆಯಲ್ಲಿ ಅಲ್ಲಿನ ಮತದಾರರು ಬಿಜೆಪಿಯನ್ನು ತಿರಸ್ಕಾರ ಮಾಡುವುದರ ಮೂಲಕ ಕಾಂಗ್ರೆಸ್‌ನ ಕೈ ಹಿಡಿದಿದ್ದಾರೆ ಎಂದರು.

ತೆಲಂಗಾಣದಲ್ಲಿ ನಡೆದ ಚುನಾವಣೆಯಲ್ಲಿ ಕೇಂದ್ರ ಸರ್ಕಾರದ ಮೋದಿಯವರಿಗೆ ಅಲ್ಲಿನ ಮತದಾರರು ಸ್ಪಷ್ಟವಾದ ಸಂದೇಶವನ್ನು ರವಾನೆ ಮಾಡಿದ್ದಾರೆ. ದಕ್ಷಿಣ ಭಾರತದಲ್ಲಿ ಬಿಜೆಪಿಗೆ ಪ್ರವೇಶ ಇಲ್ಲ ಎಂಬ ಸಂದೇಶವನ್ನು ಚುನಾವಣೆಯ ಮೂಲಕ ನೀಡಿದ್ದಾರೆ. ದಕ್ಷಿಣ ಭಾರತದ ಬಾಗಿಲು ಬಂದ್ ಎಂದು ಬಿಜೆಪಿಯವರಿಗೆ ಸಂದೇಶವನ್ನು ರವಾನಿಸಿದ್ದಾರೆ. ಕಾಂಗ್ರೆಸ್ ತೆಲಗಾಣ ರಾಜ್ಯವನ್ನು ನಿರ್ಮಾಣ ಮಾಡಿತ್ತು ಇದರ ಪರಿಣಾಮವಾಗಿ ಅಲ್ಲಿನ ಮತದಾರರು ಕೈ ಹಿಡಿದಿದ್ದಾರೆ. ಕರ್ನಾಟಕದಲ್ಲಿ ನೀಡಿ ಗ್ಯಾರೆಂಟಿ ರೀತಿಯಲ್ಲಿ ಅಲ್ಲಿಯೂ ಸಹಾ ಹಲವಾರು ಗ್ಯಾರೆಂಟಿಗಳನ್ನು ನೀಡುವುದರ ಮೂಲಕ ಅಧಿಕಾರವನ್ನು ಹಿಡಿಯಲಾಗಿದೆ ಎಂದು ಆಂಜನೇಯ ತಿಳಿಸಿದರು.

ತೆಲಂಗಾಣದ ಮತದಾರರ ಅಸೆಗಳನ್ನು ಇಟ್ಟುಕೊಂಡು ಆಧಿಕಾರವನ್ನು ನೀಡಿದ್ದಾರೂ ಅದನ್ನು ಅಲ್ಲಿನ ನೂತನ ಸಕಾರ ಈಡೇರಿಸಲಿದೆ. ಮತದಾರರ ವಿಶ್ವಾಸವನ್ನು ಉಳಿಸಿಕೊಳ್ಳಲಾಗುವುದು ರಾಜ್ಯವನ್ನು ಅಭೀವೃದ್ದಿ ರಾಜ್ಯವನ್ನಾಗಿ ಮಾಡಲಾಗುವುದು ಎಂದ ಅವರು ಮಧ್ಯ ಪ್ರದೇಶದಲ್ಲಿಯೂ ಸಹಾ ಬಿಜೆಪಿಯವರು ಮತದಾರರಿಗೆ ಗ್ಯಾರೆಂಟಿಯನ್ನು ನೀಡುವುದರ ಮೂಲಕ ನಮ್ಮದನ್ನು ಕಾಪಿ ಮಾಡಿದ್ದಾರೆ. ಕರ್ನಾಟಕದಲ್ಲಿ ಕಾಂಗ್ರೆಸ್ ರವರು ಗ್ಯಾರೆಂಟಿಗಳನ್ನು ನೀಡಿದಾಗ ರಾಜ್ಯ ದಿವಾಳಿಯಾಗುತ್ತದೆ ಎಂದು ಬೊಬ್ಬೆ ಹೊಡೆಯುತ್ತಿದ್ದ ಬಿಜೆಪಿಯವರು ಮಧ್ಯ ಪ್ರದೇಶದಲ್ಲಿ ಯಾಕೆ ನಮ್ಮದ್ದನ್ನು ಕಾಪಿ ಮಾಡಿ ಗ್ಯಾರೆಂಟಿಗಳನ್ನು ನೀಡಿದ್ದಾರೆ ಈಗ ಮತಕ್ಕಾಗಿ ಬಿಜೆಪಿಯವರಿಗೆ ಈಗ ಬಡವರ ಬಗ್ಗೆ ಅನುಕಂಪ ಬಂದಿದೆ ಎಂದು ಟೀಕಿಸಿದರು.

ಬಿಜೆಪಿಯವರು ಮತಕ್ಕಾಗಿ ದ್ವಂದ ನೀತಿಯನ್ನು ಅನುಸರಿಸುತ್ತಿದ್ದಾರೆ. ಮತದಾರರನ್ನು ಗೊಂದಲಕ್ಕೆ ಈಡು ಮಾಡುತ್ತಿದ್ದಾರೆ, ನಿಮ್ಮ ನೀತಿ ಒಂದು ರೀತಿಯಲ್ಲಿಇರಬೇಕಿದೆಗ್ಯಾರೆಂಟಿಗಳನ್ನುನೀಡಿದರು ಸಹಾ ರಾಜ್ಯದಲ್ಲಿ ಸರ್ಕಾರ ಸುಭದ್ರವಾಗಿದೆ, ಬಡವರಿಗಾಗಿ ಹಲವಾರು ಯೋಜನೆಯನ್ನು ನೀಡಲಾಗಿದೆ. ಈಗ ಬಂದಿರುವ ಬರಗಾಲವನ್ನು ಸಹಾ ಎದುರಿಸಲಾಗುವುದು, ಅದಕ್ಕೆ ಬೇಕಾದ ಸಿದ್ದತೆಯನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ನಡೆಸಿದ್ದಾರೆ. ವಾಮಮಾರ್ಗಗಳನ್ನು ಅನುಸರಿಸುವುದರಲ್ಲಿ ಬಿಜೆಪಿ ನಿಸ್ಸಿಮರಾಗಿದ್ದಾರೆ ಅಧಿಕಾರಕ್ಕಾಗಿ ಏನನ್ನು ಬೇಕಾದರೂ ಮಾಡುತ್ತಾರೆ ಎಂಬುದಕ್ಕೆ ಈ ಹಿಂದೆ ಮಧ್ಯ ಪ್ರದೇಶದಲ್ಲಿ ನಡೆದ ಘಟನೆಗಳು ಸಾಕ್ಷಿಯಾಗಿದೆ. ಕೇಂದ್ರದಲ್ಲಿ ಕುಳಿತು ರಾಜ್ಯಗಳಲ್ಲಿ ಅಧಿಕಾರವನ್ನು ಹಿಡಿಯಲು ಹಲವಾರು ತಂತ್ರಗಳನ್ನು ಹೆಣೆಯುವುದರಲ್ಲಿ ಬಿಜೆಪಿಯವರು ಮುಂದೆ ಇದ್ದಾರೆ ಎಂದು ಬಿಜೆಪಿಯವರ ಕುತಂತ್ರವನ್ನು ಅಂಜನೇಯ ಖಂಡಿಸಿದರು.

ರಾಜಸ್ಥಾನದಲ್ಲಿ ಈ ಭಾರಿ ನಮ್ಮ ಪಕ್ಷ ಅಧಿಕಾರವನ್ನು ಹಿಡಿಯಲು ಆಗಿಲ್ಲ ಆಲ್ಲಿನ ಮತದಾರರು ಒಂದೊಂದು ಬಾರಿ ಒಂದೊಂದು ಪಕ್ಷವನ್ನು ಗೆಲ್ಲಿಸುತ್ತಾರೆ ಈ ಬಾರಿ ಬೇರೆ ಪಕ್ಷವನ್ನು ಗೆಲ್ಲಿಸಿದ್ದಾರೆ ಮುಂದಿನ ಲೋಕಸಬಾ ಚುನಾವಣೆಯಲ್ಲಿ ನಮ್ಮ ಪಕ್ಷವನ್ನು ಕೈ ಹಿಡಿಯುತ್ತಾರೆ ಎಂಬ ನಂಬಿಕೆ ನನಗೆ ಇದೆ ಎಂದರು.

### ವಕೀಲರ ಮೇಲೆ ಹಲ್ಲೆ ನಡೆಸಿದ ಪೊಲೀಸರ ವಿರುದ್ಧ ಕ್ರಮ ಕೈಗೊಳ್ಳಲು ಒತ್ತಾಯಿಸಿ ಪ್ರತಿಭಟನೆ



» ಚಳ್ಳಕೆರೆ

ರಾಜ್ಯದ ವಿವಿಧೆಡೆ ನ್ಯಾಯಾಂಗ ಇಲಾಖೆಯ ಕಾರ್ಯಕಲಾಪಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ ಕಕ್ಷಿದಾರರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಹೋರಾಡುವ ವಕೀಲರ ಸಮೂಹದ ಮೇಲೆ ಆಗುವ ದೌರ್ಜನ್ಯವನ್ನು ನಿಯಂತ್ರಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ತಾಲ್ಲೂಕು ವಕೀಲರ ಸಂಘದ ಅಧ್ಯಕ್ಷ ಕೆ.ಎಂ.ನಾಗರಾಜು ಆರೋಪಿಸಿದರು.

ಅವರು, ಶನಿವಾರ ತಾಲ್ಲೂಕು ಕಚೇರಿ ಮುಂಭಾಗದಲ್ಲಿ ವಕೀಲರ ಸಂಘ ನಡೆಸಿ ಪ್ರತಿಭಟನೆಯಲ್ಲಿ ಪಾಲ್ಗೊಂಡು ತಹಶೀಲ್ದಾರ್‌ಗೆ ಮನವಿ ಅರ್ಪಿಸಿ ಮಾತನಾಡಿದರು. ರಾಜ್ಯದ ಚಿಕ್ಕಮಗಳೂರಿನಲ್ಲಿ ಯುವ ವಕೀಲ ಪ್ರೀತಮ್ ತಮ್ಮ ಕಕ್ಷಿದಾರರಿಗೆ ಸಂಬಂಧಪಟ್ಟಂತೆ ಕೆಲವೊಂದು ದಾಖಲಾತಿಗಳನ್ನು ತರುವ ಸಂದರ್ಭದಲ್ಲಿ ತಮ್ಮ ಮೋಟಾರ್ ಚಲಾಯಿಸಿಕೊಂಡು ನ್ಯಾಯಾಲಯದ ಕಾರ್ಯಕಲಾಪದಲ್ಲಿ ಭಾಗವಹಿಸಲು ತುರ್ತಾಗಿ ತೆರಳುತ್ತಿದ್ದರು. ಈ ಸಂದರ್ಭದಲ್ಲಿ ಅಲ್ಲಿನ ಪೊಲೀಸರು ಹೆಲ್ಮೇಟ್ ಹಾಕಿಲ್ಲವೆಂದು ಅವರನ್ನು ತಡೆದು ನಿಲ್ಲಿಸಿದ್ದರಲ್ಲದೆ ಅವರ ಮೇಲೆ ಮನಸೋ ಇಚ್ಚೆ ಹಲ್ಲೆ ನಡೆಸಿ ಅವಾಚ್ಯಶಬ್ದಗಳಿಂದ ನಿಂದಿಸಿದ್ದಾರೆ. ಪೊಲೀಸರ ವರ್ತನೆಯಿಂದ ಇಡೀ ವಕೀಲವೃಂದ ಮನನೊಂದಿದೆ. ಪೊಲೀಸ್ ಹಾಗೂ ವಕೀಲರು ನ್ಯಾಯಾಲಯದ ಕಾರ್ಯಕಲಾಪಗಳಲ್ಲಿ ಭಾಗವಹಿಸುವ ಮೂಲಕ ಕಕ್ಷಿದಾರರಿಗೆ ನ್ಯಾಯವನ್ನು ದೊರಕಿಸಿಕೊಡುವ ಕೆಲಸ ಮಾಡುತ್ತಾರೆ. ಆದರೆ, ಪೊಲೀಸರು ಏನನ್ನು ವಿಚಾರಿಸದೆ ವಕೀಲರನ್ನು ಹಿಗ್ಗಾಮುಗ್ಗಾ ಥಳಿಸಿದ್ದಾರೆ. ಆದ್ದರಿಂದ ಪೊಲೀಸರ ಮೇಲೆ ಕಾನೂನು ಕ್ರಮಕೈಗೊಳ್ಳಬೇಕೆಂದು ಒತ್ತಾಯ ಪಡಿಸುತ್ತಿದ್ದೇವೆಂದರು.

## ಪ್ರಮುಖ ಸುದ್ದಿ

# ನಗರದಲ್ಲಿ ನಾಳೆಯಿಂದ 'ಶರಣರು ಕಂಡ ಶಿವ' ಪ್ರವಚನ

ನಿರಾಕಾರ ಜ್ಯೋತಿ ಸ್ವರೂಪನಾಗಿರುವ ಪರಮಾತ್ಮ ಅರ್ಥಾತ್ ಭಗವಂತನನ್ನು ಸರ್ವರಿಗೂ ಪರಿಚಯಿಸುವ ನಿಟ್ಟಿನಲ್ಲಿ ಸುದೀರ್ಘ 30 ದಿನಗಳ 'ಶರಣರು ಕಂಡ ಶಿವ' ಪ್ರವಚನ ಮಾಲೆ ಕಾರ್ಯಕ್ರಮವನ್ನು ದಿನಾಂಕ 4–12–2023 ರಿಂದ 30–12–2023 ರವರೆಗೆ ದಾವಣಗೆರೆಯಲ್ಲಿ ಹಮ್ಮಿಕೊಳ್ಳಲಾಗಿದೆ.

ಅಂತರರಾಷ್ಟ್ರೀಯ ಅಧ್ಯಾತ್ಮಿಕ ಸೇವಾ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯದ ವಿದ್ಯಾನಗರ ಶಾಖಾ ಕೇಂದ್ರದ ವತಿಯಿಂದ ಕೇಂದ್ರದ ಆವರಣದಲ್ಲಿ ಈ ಪ್ರವಚನ ನಡೆಯಲಿದೆ ಎಂದು ಶಾಖೆಯ ಸಂಚಾಲಕರಾದ ರಾಜಯೋಗಿನಿ ಬ್ರಹ್ಮಾಕುಮಾರಿ ಗೀತಾಜಿ ತಿಳಿಸಿದ್ದಾರೆ.

ಇಂದಿಲ್ಲಿ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಭಗವಂತನ ರೂಪವೇನು?, ಅವನ ಪಾತ್ರವೇನು?, ಅವನ ಸ್ಮರಣೆಯಿಂದ ನಮಗೆ ಸಿಗಬಹುದಾದ ಲಾಭವೇನು? ಎಂಬಿತ್ಯಾದಿ ವಿಷಯಗಳು ಪ್ರವಚನ ಮಾಲೆಯಲ್ಲಡಗಿವೆ ಎಂದು ಹೇಳಿದರು.

**ಪ್ರವಚನದ ಮುಖ್ಯ ಉದ್ದೇಶ :** ಅರಿತರೆ ಶರಣರು, ಮರೆತರೆ ಮಾನವರು ಎಂದರೇನು?, ಶರಣರಿಗೂ–ಶಿವನಿಗೂ ಇರುವ ಸಂಬಂಧವೇನು?, ಶಂಕರನಿಗೂ–ಪರಮಾತ್ಮ ಶಿವನಿಗೂ ಇರುವ ಸಂಬಂಧವೇನು?, ಜ್ಯೋತಿರ್ಲಿಂಗಗಳಿಗೂ–ಶಿವನಿಗೂ ಇರುವ ಸಂಬಂಧವೇನು?, ಸ್ಥಾವರ ಲಿಂಗಗಳಿಗೂ, ಅಂಗೈ ಮೇಲಿನ ಲಿಂಗಗಳಿಗೂ ಸಂಬಂಧವಿದೆಯೇ?, ಶರಣರು ಕಂಡ ಶಿವನಿಗೂ, ಪುರಾಣದ ಶಿವನಿಗೂ ಇರುವ ವ್ಯತ್ಯಾಸವೇನು? ಶರಣರು ಕಂಡ ಶಿವನಿಗೂ–ಬ್ರಹ್ಮ, ವಿಷ್ಣು, ಶಂಕರಾದಿ ಗೃಹಸ್ಥ ದೇವತೆಗಳಿಗಿರುವ ವ್ಯತ್ಯಾಸವೇನು? ಸೇರಿದಂತೆ, ಇತರೆ ವಿಚಾರಗಳು ಪ್ರವಚನದ ಮುಖ್ಯಾಂಶಗಳಾಗಿವೆ.

ಜೀವ ಎಂದರೇನು? ಜೀವ, ನಿರ್ಜೀವಗಳ ವ್ಯತ್ಯಾಸವೇನು?, ನಾನು ಯಾರು? ನೀನು ಯಾರು? ಎಲ್ಲರೂ ಯಾರು?, ಪುರುಷ ಎಂದರೇನು? ಗಂಡು ಎಂದರೇನು? ಹೆಣ್ಣು ಎಂದರೇನು?, ಜನನ ಯಾರಿಗೆ? ಮರಣ ಯಾರಿಗೆ?, ನೀನು ಹುಟ್ಟಿ ಬರಲು ಕಾರಣವೇನು?, ನೀನು ಸತ್ತ ಮೇಲೆ ಎಲ್ಲಿಗೆ ಹೋಗುವೆ?, ಮಾನಸಿಕ ಶಾಂತಿ, ಮಾನಸಿಕ ಆರೋಗ್ಯ ಪಡೆಯುವ ವಿಧಾನವೇನು?, ಭಾರತದ ಭವಿಷ್ಯವೇನು? ವಿಶ್ವದ ಭವಿಷ್ಯವೇನು?, ಪಾಪ–ಪುಣ್ಯ, ಧರ್ಮ–ಕರ್ಮಗಳ ರಹಸ್ಯವೇನು?, ಪರಮಾತ್ಮ ಎಂದರೆ ಯಾರು? ಆತ ಎಲ್ಲಿದ್ದಾನೆ? ಆತನನ್ನು ನೋಡಲು ಸಾಧ್ಯವೇ? ಇತ್ಯಾದಿ ಪ್ರಶ್ನೆಗಳಿಗೆ ಪ್ರವಚನದಲ್ಲಿ ಉತ್ತರ ಸಿಗುತ್ತವೆ.

ಈಶ್ವರೀಯ ವಿಶ್ವವಿದ್ಯಾಲಯ ಹುಬ್ಬಳ್ಳಿ ವಲಯದ ನಿರ್ದೇಶಕರೂ, ಅಧ್ಯಾತ್ಮಿಕ ಮಾಸ ಪತ್ರಿಕೆ 'ವಿಶ್ವ ನವ ನಿರ್ಮಾಣ'ದ ಸಂಪಾದಕರೂ,

ಬಾಲ ಬ್ರಹ್ಮಚಾರಿಗಳೂ, 84 ವರ್ಷದ ಮಹಾನ್ ತಪಸ್ವಿಗಳೂ ಆದ ರಾಜಯೋಗಿ ಬ್ರಹ್ಮಾಕುಮಾರ ಡಾ. ಬಸವರಾಜ ರಾಜ□□ಷಿಗಳವರು ಈ ಪ್ರವಚನವನ್ನು ನಡೆಸಿಕೊಡಲಿದ್ದಾರೆ.

ನಾಡಿದ್ದು ದಿನಾಂಕ 4 ರಿಂದ ಇದೇ ದಿನಾಂಕ 30ರವರೆಗೆ ಪ್ರತಿದಿನ ಸಂಜೆ 6.30 ರಿಂದ 7.30ರವರೆಗೆ ಒಂದು ಗಂಟೆ ಕಾಲ ಪ್ರವಚನ ನಡೆಯಲಿದ್ದು, ಸಾರ್ವಜನಿಕರು ಪ್ರತಿದಿನವೂ ಪ್ರವಚನದಲ್ಲಿ ಭಾಗವಹಿಸುವುದರ ಮೂಲಕ ಪರಮಾತ್ಮನ ಸಂದೇಶವನ್ನು ಅರಿತುಕೊಂಡು ಪ್ರತಿಯೊಬ್ಬರೂ ಸನ್ಮಾರ್ಗದಲ್ಲಿ ಮುನ್ನಡೆಯುವಂತೆ ಗೀತಾಜಿ ಕೇಳಿಕೊಂಡರು.

ಉದ್ಘಾಟನಾ ಸಮಾರಂಭ : ದಿನಾಂಕ 4–12–2023ರ ಸೋಮವಾರ ಸಂಜೆ 6 ಗಂಟೆಗೆ ಶ್ರೀ ಜಡೇಸಿದ್ದ ಶಿವಯೋಗೀಶ್ವರ ಮಠದ

ಶ್ರೀ ಶಿವಾನಂದ ಮಹಾಸ್ವಾಮೀಜಿಯವರ ದಿವ್ಯ ಸಾನ್ನಿಧ್ಯದಲ್ಲಿ 'ಶರಣರು ಕಂಡ ಶಿವ' ಪ್ರವಚನ ಮಾಲಿಕೆಯ ಉದ್ಘಾಟನಾ ಸಮಾರಂಭ ಆಯೋಜನೆಗೊಂಡಿದೆ. ಈಶ್ವರೀಯ ವಿಶ್ವವಿದ್ಯಾಲಯದ ದಾವಣಗೆರೆ ಪ್ರಧಾನ ಕೇಂದ್ರದ ಮುಖ್ಯ ಸಂಚಾಲಕರಾದ ರಾಜಯೋಗಿನಿ ಬ್ರಹ್ಮಾಕುಮಾರಿ ಲೀಲಾಜಿ ಅಧ್ಯಕ್ಷತೆ ವಹಿಸುವರು. ಜಿಲ್ಲಾಧಿಕಾರಿ ಡಾ. ಎಂ.ವಿ. ವೆಂಕಟೇಶ್, ಉಪವಿಭಾಗಾಧಿಕಾರಿ ಶ್ರೀಮತಿ ಎನ್.ದುರ್ಗಾಶ್ರೀ, ಮಾಗನೂರು ಬಸಪ್ಪ ಪಬ್ಲಿಕ್ ಟ್ರಸ್ಟ್ ಗೌರವ ಕಾರ್ಯದರ್ಶಿ ಎಂ.ಬಿ. ಸಂಗಮೇಶ್ವರಗೌಡ್ರು, ಈಶ್ವರೀಯ ವಿಶ್ವವಿದ್ಯಾಲಯ ವಿದ್ಯಾನಗರ ಶಾಖೆ ಕಟ್ಟಡದಭೂ ದಾನಿ ಶ್ರೀಮತಿ ಲಕ್ಷ್ಮಮ್ಮ ದ್ಯಾಮಪ್ಪ ಅವರುಗಳು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಸಂಸ್ಥೆಯ ಧ್ಯೇಯ : ಮಾನವರು, ದೇವಾತ್ಮರು, ಪುಣ್ಯಾತ್ಮರು, ಮಹಾತ್ಮರು ಹೀಗೆ ಪ್ರತಿಯೊಬ್ಬರೂ ಸಂದರ್ಭಕ್ಕನುಗುಣವಾಗಿ ಪರಮಾತ್ಮನನ್ನು ಸ್ಮರಿಸುತ್ತಾರೆ. ಸ್ವಯಂ ಪರಮಾತ್ಮನೇ ಸ್ಥಾಪಿಸಿರುವ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯವು, ಸಾಮಾನ್ಯ ಮಾನವನನ್ನು ಮಹಾ ಮಾನವನನ್ನಾಗಿ ಪರಿವರ್ತನೆ ಮಾಡುವ ದಿಸೆಯಲ್ಲಿ ಸೇವೆ ಸಲ್ಲಿಸುತ್ತಿದೆ. ವಿಶ್ವ ಪರಿವರ್ತನೆಗೆ ಬದ್ಧವಾಗಿರುವ ಈ ಸಂಸ್ಥೆಯು ವಿಶ್ವ ಭ್ರಾತೃತ್ವದಲ್ಲಿ ತನ್ನದೇ ಆದ ವಿಶಿಷ್ಟ–ಮಾದರಿ–ಅರ್ಥಪೂರ್ಣ ಸೇವೆ ಸಲ್ಲಿಸುತ್ತಿರುವ ಏಕೈಕ ಅಧ್ಯಾತ್ಮಿಕ ಸಂಸ್ಥೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ.

ಈ ಸಂಸ್ಥೆಯು ಜಗತ್ತಿನಾದ್ಯಂತ 140 ರಾಷ್ಟ್ರಗಳಲ್ಲಿ ತನ್ನ ಸೇವಾ ಕೇಂದ್ರವನ್ನು ಹೊಂದಿದ್ದು, ವಿಶ್ವದ ಎಲ್ಲಾ ಸೇವಾ ಕೇಂದ್ರಗಳಲ್ಲಿ ಏಕಕಾಲದಲ್ಲಿ ಪ್ರತಿದಿನ ಬೆಳಿಗ್ಗೆ ಮತ್ತು ಸಂಜೆ 6.30 ರಿಂದ 8 ರವರೆಗೆ ನಡೆಯಲಿರುವ ಪ್ರವಚನದಲ್ಲಿ ಭಾಗವಹಿಸುವ ಲಕ್ಷಾಂತರ ಜನರಿಗೆ ಪರಮಾತ್ಮನ ಸಂದೇಶವನ್ನು ಉಚಿತವಾಗಿ ನೀಡುತ್ತಿದೆ ಎಂದು ಬ್ರಹ್ಮಾಕುಮಾರಿ ಗೀತಾಜಿ ವಿವರಿಸಿದರು.

## ಫಾಸ್ಟ್ ನ್ಯೂಸ್

### ಮೆಡಿಕಲ್ ಕಾಲೇಜಿಗೆ ಅಧಿವೇಶನದಲ್ಲಿ ಪೂರ್ಣ ಹಣ ಬಿಡುಗಡೆಗೆ ಆಗ್ರಹ




» **ಚಿತ್ರದುರ್ಗ**

ಬೆಳಗಾವಿಯಲ್ಲಿ ನಡೆಯುವ ಅಧಿವೇಶನದಲ್ಲಿ ಚಿತ್ರದುರ್ಗ ಸರ್ಕಾರಿ ಮೆಡಿಕಲ್ ಕಾಲೇಜಿಗೆ ಸಂಪೂರ್ಣ ಹಣ ಬಿಡುಗಡೆಗೊಳಿಸುವುದು ಸೇರಿದಂತೆ ಅನೇಕ ಬೇಡಿಕೆಗಳನ್ನು ಈಡೇರಿಸುವಂತೆ ಕರುನಾಡ ವಿಜಯಸೇನೆ ಕಾರ್ಯಕರ್ತರು ಜಿಲ್ಲಾಧಿಕಾರಿ ಕಚೇರಿ ಎದುರು ಶನಿವಾರ ಪ್ರತಿಭಟನೆ ನಡೆಸಿ ಜಿಲ್ಲಾಡಳಿತದ ಮೂಲಕ ರಾಜ್ಯದ ಮುಖ್ಯಮಂತ್ರಿಗೆ ಮನವಿ ಸಲ್ಲಿಸಿದರು.

ಇದುವರೆವಿಗೂ ಚಿತ್ರದುರ್ಗದಲ್ಲಿ ಸರ್ಕಾರಿ ಮೆಡಿಕಲ್ ಕಾಲೇಜಿಗೆ ಭೂಮಿಪೂಜೆ ನೆರವೇರಿಸಿರುವುದಿಲ್ಲ. ಐದು ನೂರು ಕೋಟಿ ರೂ.ಗಳ ಬಜೆಟ್‌ನಲ್ಲಿ ಕೇವಲ 30 ಕೋಟಿ ರೂ.ಗಳನ್ನು ಮಾತ್ರ ಸರ್ಕಾರ ಬಿಡುಗಡೆಗೊಳಿಸಿದೆ. ಚಿತ್ರದುರ್ಗದಲ್ಲಿ ಅವೈಜ್ಞಾನಿಕವಾಗಿ ರಸ್ತೆಗಳ ನಿರ್ಮಾಣವಾಗಿದ್ದು, ಎಲ್ಲಿಯೂ ಜನಸಾಮಾನ್ಯರ ಓಡಾಟಕ್ಕೆ ಫುಟ್‌ಪಾತ್‌ಗಳಿಲ್ಲ. ರಾಜಕಾಲುವೆ ಒತ್ತುವರಿಯಾಗಿರುವುದನ್ನು ತೆರವುಗೊಳಿಸಬೇಕು. ಸೇವೆ ಖಾಯಂಗಾಗಿ ಕಳೆದ ಹತ್ತು ದಿನಗಳಿಂದಲೂ ಅನಿರ್ಧಿಷ್ಠಾವಧಿ ಧರಣಿ ನಡೆಸುತ್ತಿರುವ ರಾಜ್ಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಖಾಯಂಗೊಳಿಸಬೇಕು. ರಾಜ-ಮಹಾರಾಜರು ಆಳಿದ ಐತಿಹಾಸಿಕ ಚಿತ್ರದುರ್ಗದಲ್ಲಿ ದುರ್ಗೋತ್ಸವ ನಡೆಯಬೇಕೆಂದು ಪ್ರತಿಭಟನೆಯ ನೇತೃತ್ವ ವಹಿಸಿದ್ದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಒತ್ತಾಯಿಸಿದರು.

ಮಹಿಳಾ ಘಟಕದ ಜಿಲ್ಲಾಧ್ಯಕ್ಷೆ ವೀಣಗೌರಣ್ಣ, ಗೋಪಿನಾಥ್, ಜಗದೀಶ್ ಸಿ. ರತ್ನಮ್ಮ, ಸುರೇಶ, ಅಖಿಲೇಶ್, ಮಹಮದ್ ರಫಿ, ಶಾನ್, ಅವಿನಾಶ್, ಕಮಲಮ್ಮ ಇನ್ನು ಅನೇಕರು ಪ್ರತಿಭಟಣೆಯಲ್ಲಿ ಪಾಲ್ಗೊಂಡಿದ್ದರು.

### ವಕೀಲರ ಮೇಲೆ ಹಲ್ಲೆ: ನಗರದಲ್ಲಿ ಪ್ರತಿಭಟನೆ




» **ಚಿತ್ರದುರ್ಗ**

ಚಿಕ್ಕಮಗಳೂರಿನಲ್ಲಿ ವಕೀಲ ಪ್ರೀತಮ್ ಮೇಲೆ ಪೊಲೀಸರು ಅಮಾನುಷವಾಗಿ ಹಲ್ಲೆ ನಡೆಸಿರುವುದನ್ನು ವಿರೋಧಿಸಿ ವಕೀಲರ ಸಂಘದಿಂದ ಶನಿವಾರ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಅಪರ ಜಿಲ್ಲಾಧಿಕಾರಿ ಮೂಲಕ ರಾಜ್ಯದ ಮುಖ್ಯಮಂತ್ರಿ ಹಾಗೂ ರಾಜ್ಯಪಾಲರಿಗೆ ಮನವಿ ಸಲ್ಲಿಸಲಾಯಿತು.

ನ್ಯಾಯಾಲಯದ ಆವರಣದಿಂದ ಪ್ರತಿಭಟನಾ ಮೆರವಣಿಗೆ ಹೊರಟ ನೂರಾರು ವಕೀಲರುಗಳು ಅಂಬೇಡ್ಕರ್ ಪ್ರತಿಮೆ ಮುಂಭಾಗದಿಂದ ಗಾಂಧಿವೃತ್ತಕ್ಕೆ ತೆರಳಿ ಅಲ್ಲಿಂದ ಜಿಲ್ಲಾಧಿಕಾರಿ ಕಚೇರಿಗೆ ಆಗಮಿಸಿದರು.ಪ್ರತಿಭಟನೆಯುದ್ದಕ್ಕೂ ವಕೀಲರುಗಳು ಪೊಲೀಸರ ದೌರ್ಜನ್ಯ ಖಂಡಿಸಿ ಧಿಕ್ಕಾರಗಳನ್ನು ಕೂಗಿದರು.ಚಿಕ್ಕಮಗಳೂರಿನಲ್ಲಿ ಗುರುವಾರ ಹೆಲ್ಮೆಟ್ ಧರಿಸದೆ ಬೈಕ್‌ನಲ್ಲಿ ಹೋಗುತ್ತಿದ್ದ ವಕೀಲ ಪ್ರೀತಮ್‌ನನ್ನು ತಡೆದ ಪೊಲೀಸರು ಏಕಾಏಕಿ ಬೈಕ್‌ನ ಕೀ ತೆಗೆದುಕೊಂಡು ಠಾಣೆಯೊಳಗೆ ಹೋದಾಗ ಹಿಂದೆಯೇ ಹೋದ ವಕೀಲ ಕೀ ಏಕೆ ಕಸಿದುಕೊಂಡಿದ್ದು, ನಾನೊಬ್ಬ ವಕೀಲ. ಹೆಲ್ಮೆಟ್ ಇಲ್ಲದೆ ಬೈಕ್ ಚಲಾಯಿಸಿದ್ದಕ್ಕೆ ದಂಡ ವಿಧಿಸಿ ಎಂದು ಹೇಳಿದಾಗ ಕುಪಿತಗೊಂಡ ಪೊಲೀಸರು ಮನಸೋಇಚ್ಛೆ ಥಳಿಸಿ ಕಾನೂನಿಗೆ ಅಗೌರವ ತೋರಿದ್ದಾರೆ. ಹಾಗಾಗಿ ಪೊಲೀಸರ ಮೇಲೆ ಕಾನೂನು ರೀತಿಯ ಕ್ರಮ ಕೈಗೊಂಡು ಹಲ್ಲೆಗೊಳಗಾದ ವಕೀಲ ಪ್ರೀತಮ್‌ಗೆ ಸರ್ಕಾರ ಪರಿಹಾರ ನೀಡಬೇಕೆಂದು ಪ್ರತಿಭಟನಾನಿರತ ವಕೀಲರುಗಳು ಒತ್ತಾಯಿಸಿದರು.ವಕೀಲರ ಸಂಘದ ಅಧ್ಯಕ್ಷ ವೈ.ತಿಪ್ಪೇಸ್ವಾಮಿ, ಉಪಾಧ್ಯಕ್ಷ ಬಿ.ಎಂ. ಅನಿಲ್‌ಕುಮಾರ್, ಪ್ರಧಾನ ಕಾರ್ಯದರ್ಶಿ ಆರ್. ಗಂಗಾಧರ್, ಖಜಾಂಚಿ ಬಿ.ಇ.ಪ್ರದೀಪ್, ಜಂಟಿ ಕಾರ್ಯದರ್ಶಿ ಗಿರೀಶ್ ಬಿ. ಕಾರ್ಯಕಾರಿ ಸಮಿತಿ ಸದಸ್ಯರುಗಳಾದ ದಾಸಪ್ಪ ಪಿ. ಸುರೇಶ್ ಎಸ್.ಕೆ. ಹೆಚ್.ಮೊಹಮದ್ ಇಮ್ರಾನ್, ಹರೀಶ್ ಎನ್. ಬಿ.ಎ.ರಾಜೀವ್, ಆರ್.ಧನಂಜಯ, ಎನ್.ಎಸ್. ವರುಣ, ಆರ್.ರವಿ, ರೂಪದೇವಿ ಬಿ.ಎನ್. ಶೀಲ ಪಿ. ಭಾರ್ಗವಿ ದ್ರಾವಿಡ್, ಹಿರಿಯ ವಕೀಲರುಗಳಾದ ಫಾತ್ಯರಾಜನ್,ನೂರುಲ್ಲಾಹಸನ್,ಬೀಸ್ನಳ್ಳಿಜಯಣ್ಣ, ಹೆಚ್.ಓ.ಜಗದೀಶ್ ಗುಂಡೇರಿ, ಸುದರ್ಶನ್, ಬಿ.ಸಿ.ವೆಂಕಟೇಶ್‌ಮೂರ್ತಿ, ಕೆ.ಎನ್.ವಿಶ್ವನಾಥಯ್ಯ, ಎನ್.ಬಿ.ವಿಶ್ವನಾಥ್, ಪಿ.ಹನುಮಂತಪ್ಪ, ಮೆಹರೂರ್ಖ್‌ಬೇಗಂ, ಶ್ವೇತ, ಅನೀಸ್ ಫಾತಿಮ ಸೇರಿದಂತೆ ಹಿರಿ ಕಿರಿಯ ವಕೀಲರುಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

**ಸೌಹಾರ್ಧಯುತವಾಗಿ ಪಕ್ರರಣಗಳ ಸುಖಾಂತ್ಯಕ್ಕೆ ಜನತಾ ನ್ಯಾಯಾಲಯ ವೇದಿಕೆ: ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾ. ಕೆ.ಬಿ.ಗೀತಾ**

# ಡಿ.9 ರಂದು ಬೃಹತ್ ರಾಷ್ಟ್ರೀಯ ಲೋಕದಾತ್

» **ಚಿತ್ರದುರ್ಗ**

ಜಿಲ್ಲಾ ಹಾಗೂ ತಾಲ್ಲೂಕು ನ್ಯಾಯಾಲಯಗಳಲ್ಲಿ ಡಿ.9 ರಂದು ಬೃಹತ್ ರಾಷ್ಟ್ರೀಯ ಲೋಕ ಅದಾಲತ್ ನಡೆಯಲಿದೆ. ರಾಜೀ ಸಂಧಾನದ ಮೂಲಕ ಸೌಹಾರ್ಧಯುತವಾಗಿ ಪ್ರಕರಣಗಳನ್ನು ಸುಖಾಂತ್ಯಗೊಳಿಸಿಕೊಳ್ಳಲು ಜನತಾ ನ್ಯಾಯಾಲಯ ಉತ್ತಮ ವೇದಿಕೆಯಾಗಿದೆ. ಪಕ್ಷಗಾರರು ಇದರ ಉಪಯೋಗ ಪಡೆದು ಹೆಚ್ಚು ಹೆಚ್ಚೂ ಪ್ರಕರಣಗಳನ್ನು ಇತ್ಯರ್ಥ ಪಡಿಸಿಕೊಳ್ಳಬೇಕು ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷೆ ಕೆ.ಬಿ ಗೀತಾ ಹೇಳಿದರು.

ನಗರದ ಜಿಲ್ಲಾ ನ್ಯಾಯಾಲಯದ ಸಭಾಂಗಣದಲ್ಲಿ ಪತ್ರಿಕಾಗೋಷ್ಠಿ ನಡೆಸಿ ಅವರು ಮಾತನಾಡಿದರು. ಜನತಾ ನ್ಯಾಯಾಲಯದಲ್ಲಿ ಹಾಲಿ ನ್ಯಾಯಾಧೀಶರು ಹಾಗೂ ನುರಿತ ವಕೀಲರು ಸಂಧಾನಕಾರರಾಗಿ ಇರುತ್ತಾರೆ. ಪಕ್ಷಗಾರರು ಸುಲಭ ಹಾಗೂ ಶೀಘ್ರವಾಗಿ, ಯಾವುದೇ ಖರ್ಚು ವೆಚ್ಚವಿಲ್ಲದೇ ಪ್ರಕರಣಗಳನ್ನು ನೇರವಾಗಿ ಇತ್ಯರ್ಥ ಪಡಿಸಿಕೊಳ್ಳಬಹುದು. ಎರಡು ಪಕ್ಷಗಾರರು ಪರಸ್ಪರ ಒಪ್ಪಿಗೆ ಆಗುವ ತೀರ್ಮಾನ ಕೈಗೊಂಡು, ಅದಾಲತ್‌ನಲ್ಲಿ ಪ್ರಕರಣವನ್ನು ಬಗೆಹರಿಸಿಕೊಳ್ಳಬಹುದು. ಇದರಿಂದ ಪಕ್ಷಗಾರರ ನಡುವಿನ ಬಾಂಧವ್ಯವು ಚೆನ್ನಾಗಿದ್ದು, ವಿವಾದಗಳು ಸುಖಾಂತ್ಯವಾಗುತ್ತದೆ.



ಲೋಕ ಅದಾಲತ್ ತೀರ್ಪಿನ ಮೇಲೆ ಮೇಲ್ಮನವಿ ಸಲ್ಲಿಸಲು ಅವಕಾಶವಿಲ್ಲ. ಇದು ಅಂತಿಮ ತೀರ್ಮಾನವಾಗಿದೆ. ಕೇವಲ ಮೋಸ ಅಥವಾ ಮಿಸ್ ರೆಪ್ರಸೆಂಟೇಷನ್ ನಂತಹ ಸಂದರ್ಭದಲ್ಲಿ ಮಾತ್ರ ಸದರಿ ಲೋಕ ಅದಾಲತ್‌ನ ತೀರ್ಮಾನದ ವಿರುದ್ಧ ಮೇಲ್ಮನವಿ ಸಲ್ಲಿಸಬಹುದಾಗಿದೆ. ಲೋಕ ಅದಾಲತ್‌ನಲ್ಲಿ ಪ್ರಕರಣ ಇತ್ಯರ್ಥವಾದರೆ ನ್ಯಾಯಾಲಯದ ಶುಲ್ಕವನ್ನು ಸಂಪೂರ್ಣವಾಗಿ ಮರುಪಾವತಿ ಮಾಡಲಾಗುವುದು. ಸಂಬಂಧಿಗಳು, ನೆರೆಹೊರೆಯವರು ರಾಜಿ ಸಂಧಾನದ ಮೂಲಕ ಪ್ರಕರಣಗಳ ಸುಖಾಂತ್ಯಕ್ಕೆ ಮುಂದಾಗಬೇಕು ಎಂದು ಅವರು ಮನವಿ ಮಾಡಿದರು.

ರಾಷ್ಟ್ರೀಯ ಕಾನೂನು ಸೇವಾ ಪ್ರಾಧಿಕಾರದ ತೀರ್ಮಾನದಂತೆ ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರದವರ ನಿರ್ದೇಶನದಂತೆ ಡಿ.9 ರಂದು ಸುಪ್ರಿಂ ಕೋರ್ಟ್, ಹೈಕೋರ್ಟ್ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ನ್ಯಾಯಾಲಯಗಳಲ್ಲಿ ಮೆಗಾ ಲೋಕ ಅದಾಲತ್‌ನ್ನು ಹಮ್ಮಿಕೊಳ್ಳಲಾಗಿದೆ.

ಇದರಲ್ಲಿ ವ್ಯಾಜ್ಯಪೂರ್ವ ಪ್ರಕರಣಗಳಲ್ಲಿ ಚೆಕ್ ಅಮಾನ್ಯದ ಪ್ರಕರಣಗಳು, ಬ್ಯಾಂಕ್ ವಸೂಲಾತಿ ಪ್ರಕರಣಗಳು, ಉದ್ಯೋಗ ಇತರೆ ಕಾರ್ಮಿಕ ವಿವಾದಗಳು, ಕಾರ್ಮಿಕರ ವೇತನ, ವಿದ್ಯುತ್, ನೀರಿನ ಶುಲ್ಕ, ರಾಜಿ ಆಗಬಹುದಾದಂತಹ ಅಪರಾಧಿಕ ಪ್ರಕರಣ, ಜಿಲ್ಲಾ ಗ್ರಾಹಕರ ಪರಿಹಾರ ಆಯೋಗದಲ್ಲಿನ ಪ್ರಕರಣಗಳು, ಕರ್ನಾಟಕ ವಿದ್ಯುತ್ ನಿಯಂತ್ರಣ ಆಯೋಗದ ಪ್ರಕರಣಗಳು,ಕರ್ನಾಟಕ ರಿಯಲ್ ಎಸ್ಟೇಟ್ ಪ್ರಾಧಿಕಾರಕ್ಕೆ ಸಂಬಂಧಪಟ್ಟ ಪ್ರಕರಣಗಳು, ಸಾಲ ವಸೂಲಾತಿ ನ್ಯಾಯಾಧೀಕರಣದ ಪ್ರಕರಣಗಳು,ವೈವಾಹಿಕ ಅಥವಾ ಕುಟುಂಬ ನ್ಯಾಯಾಲಯದಲ್ಲಿ ವಿಚ್ಛೇದನವನ್ನು ಹೊರತುಪಡಿಸಿದ ಉಳಿದ ಪ್ರಕರಣಗಳು, ಮೋಟಾರು ಅಪಘಾತ ಪರಿಹಾರದ ನ್ಯಾಯಾಧೀಕರಣದ ಪ್ರಕರಣಗಳು, ಕಾರ್ಮಿಕ ವಿವಾದಗಳು, ಭೂಸ್ವಾಧೀನ ಪ್ರಕರಣಗಳು ಸೇರಿದಂತೆ ಎಲ್ಲಾ ಪ್ರಕರಣಗಳನ್ನು ಲೋಕ ಅದಾಲತ್‌ನ ರಾಜಿ ಮಾಡಿಕೊಳ್ಳಬಹುದು. ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ಕರೆ ನೀಡಿದರು.

ಈ ವರ್ಷದ ಮೂರನೇ ಲೋಕ ಅದಾಲತ್‌ನಲ್ಲಿ ಚಾಲ್ತಿಯಲ್ಲಿ ಇದ್ದ 3,315 ಹಾಗೂ ವ್ಯಾಜ್ಯ ಪೂರ್ವ ಪ್ರಕರಣಗಳಾದ 82,613 ಪ್ರಕರಣಗಳನ್ನು ಸೇರಿಸಿ ಒಟ್ಟು 85,928 ಪ್ರಕರಣಗಳನ್ನು ಚಿತ್ರದುರ್ಗ ಜಿಲ್ಲೆಯಲ್ಲಿ ವಿಲೇವಾರಿ ಮಾಡಲಾಗಿದೆ. ವಿವಿಧ ನ್ಯಾಯಾಲಯದಲ್ಲಿ ವಿಚೇಧನಕ್ಕಾಗಿ ಅರ್ಜಿ ಸಲ್ಲಿಸಿದ 05 ಜೋಡಿಗಳನ್ನು ಮತ್ತೆ ಒಂದುಗೂಡಿಸಲಾಗಿದೆ ಎಂದು ಮಾಹಿತಿ ನೀಡಿದರು. ಇದಕ್ಕೆ ಸಂಬಂಧಿಸಿದಂತೆ ಯಾವುದಾದರೂ ಪ್ರಶ್ನೆಗಳಿದ್ದರೆ ಸಾರ್ವಜನಿಕರು dlsachitradurga1@gmail.com ಗೆ ಮೇಲ್ ಮಾಡಬಹುದು. ಜಿಲ್ಲಾ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಯವರ ಕಚೇರಿ ದೂರವಾಣಿ ಸಂಖ್ಯೆ 08194-222322 ಮತ್ತು 9141193935 ಕರೆ ಮಾಡಬಹುದು. ಕಚೇರಿಗೆ ಖುದ್ದಾಗಿ ಭೇಟಿ ಮಾಡಿ ಮಾಹಿತಿ ಪಡೆಯಬಹುದು ಎಂದರು.

ಪತ್ರಿಕಾಗೋಷ್ಠಿಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಅವರು ಉಪಸ್ಥಿತರಿದ್ದರು.

# ಬಿಜೆಪಿ ಕಾಂಗ್ರೆಸ್‌ಗೆ ನೈತಿಕ ಪಾಠ ಹೇಳುವುದು ಹಾಸ್ಯಾಸ್ಪದ: ಗೋಪಾಲಕೃಷ್ಣ





» **ಚಳ್ಳಕೆರೆ**

ರಾಜ್ಯದಲ್ಲಿ ಕಳೆದ ಆರು ತಿಂಗಳಿನಿಂದ ಉತ್ತಮ ಆಡಳಿತ ನೀಡುತ್ತಿರುವ ಕಾಂಗ್ರೆಸ್ ಸರ್ಕಾರ ನೇತೃತ್ವದ ಮುಖ್ಯಮಂತ್ರಿ ಎಸ್.ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿವೃದ್ಧಿ ಪರ ಕಾಮಗಾರಿಗಳಿಗೂ ಸಹ ಹೆಚ್ಚು ಉತ್ತೇಜನ ನೀಡುತ್ತಿದ್ದಾರೆ ಎಂದು ಮೊಳಕಾಲ್ಮೂರು ಕ್ಷೇತ್ರದ ಶಾಸಕ ಎನ್.ವೈ.ಗೋಪಾಲಕೃಷ್ಣ ತಿಳಿಸಿದರು.

ಅವರು, ಶನಿವಾರ ನಾಯಕನಹಟ್ಟಿ ಶ್ರೀಗುರುತಿಪ್ಪೇರುದ್ರಸ್ವಾಮಿ ದೇವಸ್ಥಾನದ ಒಳ ಮತ್ತು ಹೊರಮಠ ಆವರಣದಲ್ಲಿ ಸುಮಾರು ಒಂದು ಕೋಟಿ ವೆಚ್ಚದಲ್ಲಿ ನಿರ್ಮಿಸಿದ ಅಂಗಡಿ ಮಳಿಗೆಗಳು ಉದ್ಘಾಟಿಸಿ ಮಾತನಾಡಿದರು. ಕಳೆದ ಅವಧಿಯ ಸರ್ಕಾರ ಕೇವಲ ಭ್ರಷ್ಟಾಚಾರದಲ್ಲಿ ತೊಡಗಿದ್ದು ಅಭಿವೃದ್ಧಿ ಕುರಿತಂತೆ ಯಾವುದೇ ಜನಪರ ಯೋಜನೆಗಳನ್ನು ಜಾರಿಗೆ ತರಲು ಸಾಧ್ಯವಾಗಲಿಲ್ಲ. ಹಲವಾರು ಹಗರಣಗಳಲ್ಲಿ ಭಾಗಿಯಾದ ಹಿಂದಿನ ಸರ್ಕಾರದ ಸಚಿವರು ಮತ್ತು ಶಾಸಕರ ಕಾರ್ಯವೈಖರಿಗೆ ರಾಜ್ಯದ ಮತದಾರ ತಕ್ಕ ಉತ್ತರ ನೀಡಿ ಕಾಂಗ್ರೆಸ್ ಪಕ್ಷವನ್ನು ಮತ್ತೆ ಅಧಿಕಾರ ಸ್ಥಾನದಲ್ಲಿ ಕೂಡಿಸಿ ಸರ್ಕಾರದಿಂದ ಹೆಚ್ಚು ಪ್ರಯೋಜನ ಪಡೆಯುತ್ತಿದ್ದಾರೆಂದರು.

ಹತ್ತು ಲಕ್ಷ ವೆಚ್ಚದಲ್ಲಿ ನೂತನ ಬಸ್ ನಿಲ್ದಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಚಳ್ಳಕೆರೆ ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ಮಾತನಾಡಿ, ರಾಜ್ಯದ ಹಿರಿಯ ಮುಖಂಡರು ಹಾಗೂ ಶಾಸಕರಾದ ಎನ್.ವೈ. ಗೋಪಾಲಕೃಷ್ಣರವರ ಮಾರ್ಗದರ್ಶನದಲ್ಲಿ ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರ ಅಭಿವೃದ್ಧಿ ಪರ್ವಕ್ಕೆ ಮುನ್ನುಡಿ ಆಡಿದೆ. ಅವರು, ಸದಾಕಾಲ ಸಾರ್ವಜನಿಕರ ಸಮಸ್ಯೆ, ಸ್ಪಂದನೆ ಮತ್ತು ಅಭಿವೃದ್ಧಿ ಪರ ಚಿಂತನೆಗಳಿಗೆ ಹೆಚ್ಚು ಆಧ್ಯತೆ ನೀಡುತ್ತಾರೆ. ಯಾವುದೇ ಸಂದರ್ಭದಲ್ಲಿ ಯಾರನ್ನೂ ಟೀಕಿಸದೆ ತಮ್ಮ ಪಾಲಿನ ಕೆಲಸವನ್ನು ಪ್ರಾಮಾಣಿಕವಾಗಿ ಮಾಡುವ ಮೂಲಕ ತಾವೊಬ್ಬ ಸಮರ್ಥನಾಯಕ ಎಂಬುವುದನ್ನು ನಿರೂಪಿಸಿದ್ದಾರೆಂದರು.

ಎಇಇ ವಿಜಯಭಾಸ್ಕರ್, ದೇವಸ್ಥಾನದ ಆಡಳಿತಮಂಡಳಿ ವ್ಯವಸ್ಥಾಪಕ ಗಂಗಾಧರ,ಪ್ರಸನ್ನ, ಸಿದ್ದಿಕ್, ಮೋಹನ್‌ಕುಮಾರ್, ಸೂರನಾಯಕ, ಜಿ.ತಿಪ್ಪೇಸ್ವಾಮಿ, ಬಾಲರಾಜು, ವಕೀಲ ಜಿ.ಆರ್. ಅಶ್ವತ್ಥನಾಯಕ, ಬಾಲರೆಡ್ಡಿ, ಓಬಣ್ಣ, ತಿಪ್ಪೇಸ್ವಾಮಿ ಮುಂತಾದವರು ಉಪಸ್ಥಿತರಿದ್ದರು.

## ಗ್ರಾಮೀಣ ಭಾಗದಲ್ಲಿ ನಡೆಯುವ ಕಾನೂನು ಬಾಹಿರ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡಿ: ದೇಸಾಯಿ



» **ಚಳ್ಳಕೆರೆ**

ಗ್ರಾಮೀಣ ಭಾಗಗಳಲ್ಲಿ ಶಾಂತಿಸುವ್ಯವಸ್ಥೆ ನೆಲೆಸಲು ಅನಗತ್ಯವಾಗಿ ಪರಸ್ಪರ ಹಲ್ಲೆ ನಡೆಸಿ ಗ್ರಾಮದಲ್ಲಿ ಅಶಾಂತಿ ವಾತಾವರಣ ಉಂಟು ಮಾಡುವ ಶಕ್ತಿಗಳ ವಿರುದ್ಧ ಪೊಲೀಸ್ ಇಲಾಖೆ ಕಠಿಣ ಕಾನೂನು ಕ್ರಮ ಕೈಗೊಳ್ಳಲಿದೆ. ಪ್ರತಿಯೊಬ್ಬ ವ್ಯಕ್ತಿಯೂ ಸಮಾಜದಲ್ಲಿ ಗೌರವಯುತವಾಗಿ ಬದುಕಲು ಪೊಲೀಸ್ ಇಲಾಖೆ ಸಾಕಷ್ಟು ಶ್ರಮಸಲಿದೆ ಎಂದು ಠಾಣಾ ಇನ್ಸ್‌ಪೆಕ್ಟರ್ ರಾಜಫಕೃದ್ದೀನ್ ದೇಸಾಯಿ ತಿಳಿಸಿದರು.

ಅವರು, ಶನಿವಾರ ಠಾಣಾ ವ್ಯಾಪ್ತಿಯ ಗೋಪನಹಳ್ಳಿ, ಬೆಳಗೆರೆ, ಗೋರ್ಲತ್ತು, ಕಲಮರಹಳ್ಳಿ ಗ್ರಾಮಗಳಲ್ಲಿ ಪೊಲೀಸ್ ಜನ ಸಂಪರ್ಕ, ಶಾಂತಿ ಸಭೆ ನಡೆಸಿ ಸಾರ್ವಜನಿಕರಿಗೆ ಹಲವಾರು ಉಪಯುಕ್ತ ಮಾಹಿತಿಗಳನ್ನು ನೀಡಿದರು. ಇತ್ತೀಚಿನ ದಿನಗಳಲ್ಲಿ ಹಾಡುಹಗಲೇ ಮೋಸ ಮಾಡುವ, ಹಣ ದೋಚುವ ಪ್ರಕರಣಗಳು ಹೆಚ್ಚುತ್ತಿದ್ದು, ಯಾರೇ ಅಪರಿಚಿತ ವ್ಯಕ್ತಿಗಳು ಬಂದರೆ ಪೊಲೀಸ್ ಇಲಾಖೆ ಗಮನಕ್ಕೆ ತರುವಂತೆ ಸೂಚನೆ ನೀಡಿದರು. ಗ್ರಾಮದಲ್ಲಿ ಇಸ್ಪೀಟ್, ಅಕ್ರಮ ಮದ್ಯ ಮಾರಾಟ ಮುಂತಾದ ಸಮಸ್ಯೆಗಳಿದ್ದಲ್ಲಿ ಕೂಡಲೇ ಪೊಲೀಸರಿಗೆ ಮಾಹಿತಿ ನೀಡಬೇಕೆಂದು ಮನವಿ ಮಾಡಿದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಪಿಎಸ್‌ಐ ಜೆ.ಶಿವರಾಜು, ಪೊಲೀಸ್ ಇಲಾಖೆ ಮತ್ತು ಜನರ ನಡುವೆ ಉತ್ತಮ ಸಾಮರಸ್ಯವಿದ್ದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯಲು ಸಾಧ್ಯವಿಲ್ಲ. ಪೊಲೀಸ್ ಇಲಾಖೆ ಜನಸ್ನೇಹಿ ಇಲಾಖೆಯಾಗಿ ಕೆಲಸ ನಿರ್ವಹಿಸುತ್ತಿದೆ. ಸಾರ್ವಜನಿಕರಿಗೆ ರಕ್ಷಣೆ ನೀಡುವುದಲ್ಲದೆ, ಅವರ ಹಕ್ಕು ಕರ್ತವ್ಯ ಪಾಲಿಸಲು ಪೊಲೀಸ್ ಇಲಾಖೆ ನೆರವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಗೋಪನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರಾಧಮ್ಮ, ಪ್ರಸನ್ನಕುಮಾರ್, ಉಮೇಶ್, ಮಹಂತೇಶ್, ಎಎಸ್‌ಐ ದೊಡ್ಡತಿಪ್ಪಯ್ಯ, ಮಂಜುನಾಥಮುಡುಕೆ ಮುಂತಾದವರು ಉಪಸ್ಥಿತರಿದ್ದರು.



### ಸನ್ಮಾನ

**ಮೆದೇಹಳ್ಳಿಯಲ್ಲಿರುವ ಪಾರಂಪರಿಕ ವೈದ್ಯರುಗಳಾದ ಮಂಜುನಾಥ್ ಆರಾಧ್ಯ, ಶ್ರೀಮತಿ ಸುವರ್ಣಮ್ಮ, ದಿನೇಶ್ ಇವರುಗಳನ್ನು ಪುರುಷೋತ್ತಮಾನಂದಪುರಿ ಸ್ವಾಮೀಜಿ ಸನ್ಮಾನಿಸಿದರು.**

## ಪ್ರಮುಖ ಸುದ್ದಿ

# ಎನ್ ಎಸ್ ಎಸ್ ಶಿಬಿರಕ್ಕೆ ಶಾಸಕ ಡಾ.ಚಂದ್ರಪ್ಪ ಚಾಲನೆ

» **ಹೊಳಲ್ಕೆರೆ**

ಭಾರತದಲ್ಲಿರುವ 140 ಕೋಟಿ ಜನಸಂಖ್ಯೆಯಲ್ಲಿ ನೂರು ಕೋಟಿಗೂ ಹೆಚ್ಚು ಜನ ಹಳ್ಳಿಗಾಡಿನಲ್ಲಿ ವಾಸಿಸುತ್ತಿದ್ದಾರೆ. ವ್ಯವಸಾಯವನ್ನು ಅವಲಂಭಿಸಿರುವ ರಾಷ್ಟ್ರ ನಮ್ಮದು ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ದಾವಣಗೆರೆ ವಿಶ್ವವಿದ್ಯಾನಿಲಯ ವತಿಯಿಂದ ಹೊಳಲ್ಕೆರೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಮಾಳೇನಹಳ್ಳಿಯಲ್ಲಿ ಏಳು ದಿನಗಳ ಹಮ್ಮಿಕೊಂಡಿರುವ 2023-24 ನೇ ಸಾಲಿನ ಎನ್.ಎಸ್.ಎಸ್.ವಿಶೇಷ ವಾರ್ಷಿಕ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.



ಮುಂದಿನ ಜೀವನಕ್ಕೆ ಅಡಿಯಿಡುವ ವಿದ್ಯಾರ್ಥಿಗಳು ಹಳ್ಳಿಗಾಡಿನಲ್ಲಿ ರೈತರ ಸಮಸ್ಯೆಗಳನ್ನು ಅರ್ಥಮಾಡಿಕೊಳ್ಳಬೇಕು. ಏಳು ದಿನಗಳ ಕಾಲ ಗ್ರಾಮದಲ್ಲಿ ಸ್ವಚ್ಚತೆ, ಗಿಡ ನೆಡುವುದು, ಆರೋಗ್ಯ ತಪಾಸಣೆ ಹೀಗೆ ಹತ್ತು ಹಲವಾರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ನಿಮ್ಮಲ್ಲಿ ಬದ್ದತೆ ಮುಖ್ಯ. ವೈದ್ಯರುಗಳು ಇಲ್ಲಿಗೆ ಆಗಮಿಸಿದ್ದು, ಆರೋಗ್ಯದ ಮಹತ್ವ ತಿಳಿಸಲಿದ್ದಾರೆಂದರು.

ಮನುಷ್ಯ ಜೀವನ ಎಷ್ಟೋ ಜನ್ಮದ ಪುಣ್ಯ. ಇಸ್ರೇಲ್-ಹಮಾಸ್ ನಡುವೆ ಯುದ್ದ ನಡೆಯುತ್ತಿದೆ. ಕೇವಲ 90 ಲಕ್ಷದಷ್ಟಿರುವ ಚಿಕ್ಕ ರಾಷ್ಟ್ರ ಇಸ್ರೇಲ್‌ನಲ್ಲಿ ಹುಟ್ಟಿದ ಪ್ರತಿಯೊಬ್ಬ ಪ್ರಜೆಯೂ ಶಿಕ್ಷಣದ ನಂತರ ಕಡ್ಡಾಯವಾಗಿ ಸೇನೆಯಲ್ಲಿ ಸೇವೆ ಸಲ್ಲಿಸಬೇಕೆಂಬ ನಿಯಮವಿದೆ. ಹಾಗಾಗಿ ಅವರು ಯಾವ ದೇಶ ಯುದ್ದಕ್ಕೆ ಬಂದರೂ ಎದುರಿಸುವಷ್ಟು ಶಕ್ತಿಶಾಲಿಯಾಗಿದ್ದಾರೆ. ಮಳೆ ತುಂಬಾ ಕಡಿಮೆ ಆದರೆ ಅಲ್ಲಿ ಅತ್ಯುತ್ತಮ ಬೆಳೆ ಬೆಳೆದು ಪ್ರಪಂಚಕ್ಕೆ ಮಾದರಿಯಾಗಿದ್ದಾರೆ. ಹನಿ ನೀರಾವರಿ ಪದ್ದತಿ ರೂಢಿಗೆ ಬಂದಿದ್ದು, ಇಸ್ರೇಲ್‌ನಿಂದ ಎನ್ನುವುದನ್ನು ಅರ್ಥಮಾಡಿಕೊಳ್ಳಬೇಕು ಎಂದರು.

ಇಸ್ರೇಲ್‌ನಲ್ಲಿ ಎಲ್ಲರೂ ಅತ್ಯುನ್ನತ ಶಿಕ್ಷಣ ಪಡೆದವರಿದ್ದಾರೆ. ಆದರೆ ಎಲ್ಲರೂ ಅಲ್ಲಿ ಕೃಷಿ ಮಾಡುವುದು ಸಹಜ. ಚಿಕ್ಕವ್ವನಹಳ್ಳಿಯಿಂದ ರಾಮಗಿರವರೆಗೆ ರಸ್ತೆ ಮಾಡಿಸಿದ್ದೇನೆ. 493 ಹಳ್ಳಿಗಳಲ್ಲಿಯೂ ಗುಣ ಮಟ್ಟದ ರಸ್ತೆಗೆ ಹಣ ನೀಡಿದ್ದೇನೆ. ಮೂವತ್ತು ವರ್ಷದ ಹಿಂದೆಯೇ ಭರಮಸಾಗರ ಕ್ಷೇತ್ರದಿಂದ ಶಾಸಕನಾಗಿ ರಾಜಕೀಯ ಆರಂಭಿಸಿದೆ. 386 ಹಳ್ಳಿಗಳಲ್ಲಿ ರಸ್ತೆಗಳೇ ಇರಲಿಲ್ಲ. ಆಗಿನ ಸರ್ಕಾರದಲ್ಲಿ ಹತ್ತು ರೂ. ಕೂಡ ಅನುದಾನ ಸಿಗುತ್ತಿರಲಿಲ್ಲ. ಅಂತಹ ಕಷ್ಟದ ಪರಿಸ್ಥಿತಿಯಲ್ಲಿ ರಸ್ತೆಗಳನ್ನು ನಿರ್ಮಾಣ ಮಾಡಿದ್ದರಿಂದ ರಸ್ತೆ ರಾಜ ಎನ್ನುವ ಬಿರುದು ನೀಡಿ ಎರಡನೆ ಬಾರಿಯೂ ನನ್ನನ್ನು ಗೆಲ್ಲಿಸಿದರು. ಅಧಿಕಾರ ಶಾಶ್ವತವಲ್ಲ. ಇದ್ದಷ್ಟು ದಿನ ಹತ್ತಾರು ಜನ ಮೆಚ್ಚುವ ರೀತಿಯಲ್ಲಿ ಕೆಲಸ ಮಾಡುವ ರಾಜಕಾರಣಿ ನಾನು. ಯಾರಿಂದಲೂ ಹೇಳಿಸಿಕೊಂಡು ಕೆಲಸ ಮಾಡುವವನಲ್ಲ. ಕ್ಷೇತ್ರದಲ್ಲಿ ಎಲ್ಲಿ ಯಾವ ಅಭಿವೃದ್ದಿ ಕೈಗೊಂಡರೆ ಜನರಿಗೆ ಅನುಕೂಲವಾಗುತ್ತದೆ ಎನ್ನುವ ಎಚ್ಚರಿಕೆಯಿಟ್ಟುಕೊಂಡಿದ್ದೇನೆ. ಏಳು ದಿನ ಕಾಲ ನಡೆಯುವ ಈ ಶಿಬಿರದಲ್ಲಿ ಆರೋಗ್ಯಕ್ಕೆ ಹೆಚ್ಚಿನ ಒತ್ತು ಕೊಡಿ. ಮಿತ ಆಹಾರ ಸೇವನೆಯಿಂದ ಉತ್ತಮ ಆರೋಗ್ಯ ಕಾಪಾಡಿಕೊಳ್ಳಬಹುದು ಎಂದು ಹೇಳಿದರು. ಹೊಳಲ್ಕೆರೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯರಾದ ಡಿ.ಆರ್.ಹನುಮಂತರಾಯ,ಮಾಳೇನಹಳ್ಳಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ಗೌರಮ್ಮ, ನಿವೃತ್ತ ಶಿಕ್ಷಕ ಬಿ.ಬಸಪ್ಪ, ಗ್ರಾಮ ಪಂಚಾಯಿತಿ ಸದಸ್ಯರಾದ ಪ್ರಸನ್ನಕುಮಾರ್, ರಾಜಪ್ಪ, ಬಸಪ್ಪ, ಬಸವರಾಜ್, ರಾಜಣ್ಣ, ರಾಕೇಶ್, ಡಾ.ರಮೇಶ್, ದೇವರಾಜ್, ಚೇತನ್ ಇನ್ನು ಮುಂತಾದವರು ಶಿಬಿರದಲ್ಲಿ ಭಾಗವಹಿಸಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T